ಸಂಪುಟ 01 | ಸಂಚಿಕೆ 109 | ಶನಿವಾರ 07 ಮಾರ್ಚ್ 2026 | ಪುಟ 4 | ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

# ನೈಜ್ಯ ದೆಸೆ

NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

ಸಿಂಧನೂರು, ಮಸ್ಕಿ ಮಾನ್ವಿ, ಲಿಂಗಸೂರು, ರಾಯಚೂರ,ದೇವದುರ್ಗ ಬಳ್ಳಾರಿ, ಕೊಪ್ಪಳ ಯಾದಗಿರಿ, ಕಲಬುರ್ಗಿ, ಬೀದರ, ವಿಜಯಪುರ. ಗದಗ, ವಿಜಯನಗರ. ಏಕಕಾಲಕ್ಕೆ ಪ್ರಕಟಣೆ

REGIONAL KANNADA DAILY MORNING

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ

1) ಚಾಪ್ಚಾರ್ ಕುಟ್ ಹಬ್ಬ

ಚಾಪ್ಚಾರ್ ಕುಟ್ (Chapchar Kut) ಮಿಜೋರಾಂನ ಅತ್ಯಂತ ಹಳೆಯ, ಜನಪ್ರಿಯ ಮತ್ತು ದೊಡ್ಡ ವಸಂತ ಕೃಷಿ ಹಬ್ಬವಾಗಿದೆ. ಮಾರ್ಚ್ ತಿಂಗಳಲ್ಲಿ ನಡೆಯುವ ಈ ಹಬ್ಬವು ಜುಮ್ (Shifting Cultivation) ಕೃಷಿಯ ಅಡಿಯಲ್ಲಿ ಬಿದಿರು ಮತ್ತು ಮರಗಳನ್ನು ಕತ್ತರಿಸಿ, ಅವು ಒಣಗಲು ಕಾಯುವ ಅವಧಿಯಲ್ಲಿ (ಸುಮಾರು ಮಾರ್ಚ್) ಆಚರಿಸಲಾಗುತ್ತದೆ. ಚಾಪ್ಚಾರ್' ಎಂದರೆ ಕತ್ತರಿಸಿದ ಬಿದಿರು ಒಣಗುವ ಸಮಯ, 'ಕುಟ್' ಎಂದರೆ ಹಬ್ಬ. ಶ್ರಮದಾಯಕ ಕೆಲಸದ ನಂತರ ವಿರಾಮವನ್ನು ಇದು ಸೂಚಿಸುತ್ತದೆ ಇದು ಕೃತಜ್ಞತೆ, ಸಂಭ್ರಮ, ಸಮುದಾಯದ ಏಕತೆ ಮತ್ತು ಸಂತೋಷದ ಸಂಕೇತವಾಗಿದೆ.

## ಸುಭಾಷಿತ

ಬಲಿಷ್ಠತೆ ಎನ್ನುವುದು ನಿಮ್ಮ ದೈಹಿಕ ಸಾಮರ್ಥದಿಂದ ಬರುವಂಥದಲ್ಲ ಅದು ಅದಮ್ಯ ಅಂತಃಶಕ್ತಿಯಿಂದ ಬರುವಂಥದ್ದು.

ಮಹಾತ್ಮ ಗಾಂಧಿ

# 16 ವರ್ಷದೊಳಗಿನ ಮಕ್ಕಳಿಗೆ ಸಾಮಾಜಿಕ ಜಾಲತಾಣಗಳ ಬಳಕೆ ನಿಷೇಧ ಕುರಿತು ಬಜೆಟ್‌ನಲ್ಲಿ ಪ್ರಸ್ತಾಪ

ಬೆಂಗಳೂರು: ಸಾರ್ಟ್‌ಫೋನ್ ಮತ್ತು ಸಾಮಾಜಿಕ ಜಾಲತಾಣಗಳ ವ್ಯಸನದಿಂದ ಮಕ್ಕಳನ್ನು ಮುಕ್ತಗೊಳಿಸಲು ಕರ್ನಾಟಕ ಸರ್ಕಾರವು ಐತಿಹಾಸಿಕ ತೀರ್ಮಾನವೊಂದನ್ನು ಕೈಗೊಂಡಿದೆ. ವಿಧಾನಸಭೆಯಲ್ಲಿ ಪ್ರಸಕ್ತ ಸಾಲಿನ ಬಜೆಟ್ ಮಂಡಿಸಿರುವ ಮುಖ್ಯಮಂತ್ರಿ ಸಿದ್ದರಾಮಯ್ಯನವರು, 16 ವರ್ಷದೊಳಗಿನ ಮಕ್ಕಳಿಗೆ ಸಾಮಾಜಿಕ ಜಾಲತಾಣಗಳ ಬಳಕೆಯನ್ನು ನಿಷೇಧಿಸುವ ಬಗ್ಗೆ ಪ್ರಸ್ತಾಪಿಸಿದ್ದು, ಈ ಕಾನೂನು ಜಾರಿಯಾದಲ್ಲಿ ಭಾರತದಲ್ಲೇ ಇಂಥ ಕಟ್ಟುನಿಟ್ಟಿನ ನಿಯಮ ತಂದ ಮೊದಲ ರಾಜ್ಯ ಎಂಬ ಹೆಗ್ಗಳಿಕೆಗೆ ಕರ್ನಾಟಕ ಪಾತ್ರವಾಗಲಿದೆ.

ಮೊಬೈಲ್ ಮತ್ತು ಡಿಜಿಟಲ್ ವ್ಯಸನದಿಂದ ಮಕ್ಕಳಲ್ಲಿ ಆರೋಗ್ಯ ಸಮಸ್ಯೆಗಳು, ಮಾನಸಿಕ ಒತ್ತಡ, ಆತಹತ್ಯೆಯ ಭಾವನೆಗಳು, ಸಾಮಾಜಿಕ ಸಂಬಂಧಗಳಲ್ಲಿ ಕುಸಿತ ಹಿನ್ನೆಲೆಯಲ್ಲಿ ಈ ಕ್ರಮ ಅನಿವಾರ್ಯವಾಗಿದೆ. ಅಪ್ರಾಪ್ತ ಮಕ್ಕಳನ್ನು ಸೋಶಿಯಲ್ ಮೀಡಿಯಾ ದುರುಪಯೋಗದಿಂದ ರಕ್ಷಿಸಿ, ಅವರ ಆರೋಗ್ಯ, ಶಿಕ್ಷಣ ಮತ್ತು ಭವಿಷ್ಯವನ್ನು ಕಾಪಾಡುವುದು ಇದರ ಮುಖ್ಯ ಉದ್ದೇಶವಾಗಿದೆ. ಸರ್ಕಾರದ ಉದ್ದೇಶ ಮತ್ತು ಜಾರಿ ಸರ್ಕಾರವು ಈ ನಿಷೇಧವನ್ನು ಕೇವಲ ಕಾನೂನು ಮೂಲಕವಲ್ಲದೆ, ಡಿಜಿಟಲ್ ಡಿಟಾಕ್ಸಿಫಿಕೇಷನ್




ಮತ್ತು ಬಿಯಾಂಡ್ ಸ್ಕ್ರೀನ್ಸ್ ಎಂಬ ಜಾಗೃತಿ ಕಾರ್ಯಕ್ರಮಗಳ ಮೂಲಕ ಯೋಜಿಸಿದೆ.

ಶಾಲೆಗಳಲ್ಲಿ ಡಿಜಿಟಲ್ ಸಾಕ್ಷರತೆ, ಪೋಷಕರ ಜವಾಬ್ದಾರಿ ಮತ್ತು ಆರೋಗ್ಯ ತಜ್ಞರ ಸಲಹೆಗಳನ್ನು ಒಳಗೊಂಡಂತೆ ಸಮಗ್ರ ಕಾರ್ಯತಂತ್ರ ರೂಪಿಸಲಾಗುತ್ತಿದೆ ಎಂದು ತಿಳಿದುಬಂದಿದೆ. ಸಾಮಾಜಿಕ ಜಾಲತಾಣಗಳ ಅತಿಯಾದ ಬಳಕೆಯಿಂದ ಮಕ್ಕಳ ಏಕಾಗ್ರತೆ ಮತ್ತು ಮಾನಸಿಕ ಆರೋಗ್ಯದ ಮೇಲೆ ವ್ಯತಿರಿಕ್ತ ಪರಿಣಾಮ ಉಂಟಾಗುತ್ತಿದೆ ಎಂದು ಸರ್ಕಾರ ಆತಂಕ ವ್ಯಕ್ತಪಡಿಸಿದೆ. ಅಪ್ರಾಪ್ತರು ಆನ್‌ಲೈನ್ ಕಿರುಕುಳ, ಅಶ್ಲೀಲ ವಿಷಯಗಳು ಮತ್ತು ಸೈಬರ್ ವಂಚನೆಗಳಿಗೆ ಬಲಿಯಾಗುವುದನ್ನು ತಡೆಯುವುದು ಇದರ ಪ್ರಮುಖ ಉದ್ದೇಶವಾಗಿದೆ.

ವಯಸ್ಸಿನ ದೃಢೀಕರಣ ಕಡ್ಡಾಯದಿಂದ ಫೇಸ್‌ಬುಕ್, ಇನ್‌ಸ್ಟಾಗ್ರಾಮ್, ಎಕ್ಸ್ ನಂತಹ (ಟ್ವಿಟ್ಟರ್)ವೇದಿಕೆಗಳಿಗೆ ಲಾಗ್-ಇನ್ ಆಗುವಾಗ ಆಧಾರ್ ಅಥವಾ ಇತರ ಗುರುತಿನ ಚೀಟಿ ಮೂಲಕ ವಯಸ್ಸನ್ನು ಕಡ್ಡಾಯವಾಗಿ ದೃಢೀಕರಿಸಬೇಕಾಗುತ್ತದೆ. 16 ವರ್ಷದೊಳಗಿನ ಖಾತೆ ತೆರೆಯಲು ಅವಕಾಶ ನೀಡುವ ಕಂಪನಿಗಳ ಮೇಲೆ ಭಾರೀದಂಡ ವಿಧಿಸುವ ಅವಕಾಶ ಈ ಕಾನೂನಿನಲ್ಲಿದೆ. ಮಕ್ಕಳ ಡಿಜಿಟಲ್ ಚಟುವಟಿಕೆಗಳ ಮೇಲೆ ನಿಗಾ ಇಡಲು ಪೋಷಕರಿಗೆ ವಿಶೇಷ ಮಾರ್ಗಸೂಚಿಗಳನ್ನು ಬಿಡುಗಡೆ ಮಾಡಬಹುದು. ಮಕ್ಕಳ ಮೆದುಳಿನ ಬೆಳವಣಿಗೆಯ ಹಂತದಲ್ಲಿ ಸೋಷಿಯಲ್ ಮೀಡಿಯಾದ ಪ್ರಚೋದನೆ ಅಪಾಯಕಾರಿ.

ಈ ನಿಷೇಧವು ಮಕ್ಕಳನ್ನು ಸೃಜನಾತಕ ಚಟುವಟಿಕೆಗಳತ್ತ ಮರಳುವಂತೆ ಮಾಡುತ್ತದೆ ಎನ್ನುವುದು ಮನಶ್ಶಾಸ್ತ್ರಜ್ಞರು ಮತ್ತು ಶಿಕ್ಷಣ ತಜ್ಞರ ಅಭಿಪ್ರಾಯವಾಗಿದೆ. ತಂತ್ರಜ್ಞಾನವನ್ನು ಮಾತ್ರ ಸೀಮಿತಗೊಳಿಸಿ, ಮನರಂಜನೆಯ ಹೆಸರಿನಲ್ಲಿ ನಡೆಯುವ ಸಮಯ ವ್ಯರ್ಥವನ್ನು ತಡೆಯಲು ಈ ಕ್ರಮ ಪೂರಕವಾಗಲಿದೆ. ಕರ್ನಾಟಕ ಸರ್ಕಾರವು ತಂತ್ರಜ್ಞಾನದ ಲಾಭ ಮತ್ತು ಹಾನಿಗಳ ನಡುವೆ ಸಮತೋಲನ ಕಾಯ್ದುಕೊಳ್ಳಲು ಈ ಹೆಜ್ಜೆ ಇಟ್ಟಿದೆ. ಇದು ಘೋಷಣೆಯಾಗಿ ಉಳಿಯದೆ, ಕಟ್ಟುನಿಟ್ಟಾಗಿ ಜಾರಿಗೆ ಬಂದರೆ ರಾಜ್ಯದ ಶೈಕ್ಷಣಿಕ ಕ್ಷೇತ್ರದಲ್ಲಿ ದೊಡ್ಡ ಬದಲಾವಣೆ ನಿರೀಕ್ಷಿಸಬಹುದು.

## ಆಕ್ಷೇಪಣೆಗೆ ಅರ್ಜಿ ಆಹ್ವಾನ

ನೈಜ್ಯ ದೆಸೆ ನ್ಯೂಸ್

ರಾಯಚೂರು: ರಾಯಚೂರು ನಗರದ ಸೀಮಾಂತರದಲ್ಲಿ ಬರುವ ವಾರ್ಡ್ ನಂ. 05ರ ವೆಂಕಟೇಶ್ವರ ಕೌಂಟಿ, ನಿವೇಶನ ಮುನ್ಸಿಪಾಲ್ ನಂ. 1-11-66/05/47,48,49&50 ರಲ್ಲಿ ಶ್ರೀ ಮೊಹಮ್ಮದ್ ಶಬ್ಬಿರ್ ತಂದೆ ಹಮೀದ್ ಪಾಟೇಲ್ ಇವರು ಧಾರ್ಮಿಕ ಉದ್ದೇಶಕ್ಕಾಗಿ ಪ್ರೇಯರ್ ಹಾಲ್ ಕಟ್ಟಡವನ್ನು ನಿರ್ಮಾಣ ಮಾಡಲು ಅರ್ಜಿ ಸಲ್ಲಿಸಿರುತ್ತಾರೆ.

ಈ ಸ್ಥಳದಲ್ಲಿ ನಕ್ಷೆ ಪ್ರಕಾರ ಕಟ್ಟಡ ಪರವಾನಿಗೆ ಕೋರಿ ಅರ್ಜಿ ಸಲ್ಲಿಸಿರುವುದರಿಂದ ಇದಕ್ಕೆ ಅಕ್ಕ-ಪಕ್ಕದ ಹಾಗೂ ಸಾರ್ವಜನಿಕರಿಂದ ಯಾವುದೇ ಆಕ್ಷೇಪಣೆ ಇದ್ದಲ್ಲಿ ಈ ನೋಟೀಸ್ ಪ್ರಕಟಿಸಿದ (15) ದಿನಗಳ ಒಳಗಾಗಿ ದಾಖಲೆಯೊಂದಿಗೆ ಈ ಕಾರ್ಯಾಲಯಕ್ಕೆ ದೂರು ಸಲ್ಲಿಸತಕ್ಕದ್ದು, ಅವಧಿ ಮುಗಿದ ಮೇಲೆ ಆಕ್ಷೇಪಣೆ ತಕರಾರು ಸಲ್ಲಿಸಿದ್ದಲ್ಲಿ ಅದನ್ನು ಪರಿಗಣಿಸಲಾಗುವುದಿಲ್ಲವೆಂದು ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕರ್ನಾಟಕ ಬಜೆಟ್‌ನಲ್ಲಿ ವಿಕಲಚೇತನರ ಸಂಪೂರ್ಣ ನಿರ್ಲಕ್ಷ್ಯ: ಶಿವಕುಮಾರ್ ಚಲ್ಮಲ್ ಆಕ್ರೋಶ

ನೈಜ್ಯ ದೆಸೆ ನ್ಯೂಸ್

ಮಾನ್ವಿ: ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಂಡಿಸಿದ 2026?27ನೇ ಸಾಲಿನ ಕರ್ನಾಟಕ ಬಜೆಟ್ ವಿಕಲಚೇತನರ ದೃಷ್ಟಿಯಿಂದ ಅತ್ಯಂತ ನಿರಾಶಾದಾಯಕವಾಗಿದೆ ಎಂದು ಸಂಕಲ್ಪ ವಿಕಲಚೇತನರ ಒಕ್ಕೂಟದ ಜಿಲ್ಲಾಧ್ಯಕ್ಷ ಶಿವಕುಮಾರ್ ಚಲ್ಮಲ್ ತೀವ್ರ ಆಕ್ರೋಶ ವ್ಯಕ್ತಪಡಿಸಿದರು.

ಸಂಕಲ್ಪ ವಿಕಲಚೇತನರ ಒಕ್ಕೂಟದ ವತಿಯಿಂದ ಈ ಹಿಂದೆ ರಾಜ್ಯ ಸರ್ಕಾರಕ್ಕೆ ವಿಕಲಚೇತನರ ವಿವಿಧ ಸೌಲಭ್ಯಗಳ ಕುರಿತು ಮನವಿ ಸಲ್ಲಿಸಲಾಗಿತ್ತು. ವಿಶೇಷವಾಗಿ ವಿಕಲಚೇತನರ ಮಾಸಿಕ ಪಿಂಚಣಿಯನ್ನು ಹೆಚ್ಚಿಸುವುದು, ಎಲ್ಲಾ ವಿಕಲಚೇತನರಿಗೆ ರಾಜ್ಯಮಟ್ಟದ ಉಚಿತ ಬಸ್ ಪಾಸ್ ಸೌಲಭ್ಯ ಕಲ್ಪಿಸುವುದು, ವಿಕಲಚೇತನರಿಗಾಗಿ ಮೀಸಲಾದ 5% ಅನುದಾನದ ಸಮರ್ಪಕ ಬಳಕೆ ಹಾಗೂ ಗ್ರಾಮ ಪಂಚಾಯಿತಿ, ಪಟ್ಟಣ, ನಗರ ಮತ್ತು ತಾಲೂಕು ಮಟ್ಟಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪುನರ್ವಸತಿ ಕಾರ್ಯಕರ್ತರ ಹುದ್ದೆಗಳನ್ನು ಶಾಶ್ವತಗೊಳಿಸಿ ಅವರಿಗೆ ಸಮರ್ಪಕ ವೇತನ ನೀಡುವಂತೆ ಸರ್ಕಾರದ ಗಮನಕ್ಕೆ ತರಲಾಗಿತ್ತು.



ಇದಲ್ಲದೆ UDID ಕಾರ್ಡ್ ಮತ್ತು ವಿಕಲಚೇತನ ಪ್ರಮಾಣಪತ್ರಗಳ ವಿತರಣೆಯಲ್ಲಿ ಆಗುತ್ತಿರುವ ವಿಳಂಬವನ್ನು ನಿವಾರಿಸಿ, ವಿಕಲಚೇತನರಿಗೆ ವಿಶೇಷ ವಸತಿ ಯೋಜನೆ ಜಾರಿಗೊಳಿಸುವುದು ಸೇರಿದಂತೆ ಹಲವು ನ್ಯಾಯಸಮ್ಮತ ಬೇಡಿಕೆಗಳನ್ನು ಒಕ್ಕೂಟದ ವತಿಯಿಂದ ಮನವಿ ಪತ್ರಗಳ ಮೂಲಕ ಸಲ್ಲಿಸಲಾಗಿತ್ತು. ಆದರೆ ಈ ಎಲ್ಲ ಬೇಡಿಕೆಗಳ ಕುರಿತು 2026?27ನೇ ಸಾಲಿನ ಬಜೆಟ್‌ನಲ್ಲಿ ಯಾವುದೇ ಸ್ಪಷ್ಟ ಘೋಷಣೆ ಮಾಡದೇ ಇರುವುದರಿಂದ ವಿಕಲಚೇತನ ಸಮುದಾಯದಲ್ಲಿ ತೀವ್ರ ನಿರಾಸೆ ಮತ್ತು ಅಸಮಾಧಾನ ಉಂಟಾಗಿದೆ ಎಂದು ಅವರು ಹೇಳಿದರು.

ರಾಜ್ಯದಲ್ಲಿ ಲಕ್ಷಾಂತರ ವಿಕಲಚೇತನರು ಜೀವನೋಪಾಯ, ಶಿಕ್ಷಣ, ಚಿಕಿತ್ಸೆ ಮತ್ತು ಸಂಚಾರ ಸೇರಿದಂತೆ ಅನೇಕ ಮೂಲಭೂತ ಸೌಲಭ್ಯಗಳ ಕೊರತೆಯನ್ನು ಎದುರಿಸುತ್ತಿದ್ದಾರೆ. ಇಂತಹ ಪರಿಸ್ಥಿತಿಯಲ್ಲಿ ಸರ್ಕಾರವು ವಿಕಲಚೇತನರ ಸಮಸ್ಯೆಗಳನ್ನು ಗಂಭೀರವಾಗಿ ಪರಿಗಣಿಸಿ, ಅವರ ಬದುಕಿನ ಮಟ್ಟವನ್ನು ಸುಧಾರಿಸಲು ವಿಶೇಷ ಯೋಜನೆಗಳು ಮತ್ತು ಅನುದಾನಗಳನ್ನು ಘೋಷಿಸಬೇಕಿತ್ತು. ಆದರೆ ಬಜೆಟ್‌ನಲ್ಲಿ ಈ ವಿಷಯಗಳ ಬಗ್ಗೆ ಯಾವುದೇ ಪ್ರಸ್ತಾಪ ಮಾಡದೇ ಇರುವುದರಿಂದ ವಿಕಲಚೇತನರ ನಿರೀಕ್ಷೆಗಳು ಭಂಗಗೊಂಡಿವೆ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದರು. ಸಮಾಜದ ಹಿಂದುಳಿದ ಮತ್ತು ವಿಶೇಷ ಚೇತನರ ಸಮಸ್ಯೆಗಳ ಬಗ್ಗೆ ಸರ್ಕಾರವು ಹೆಚ್ಚು ಸ್ಪಂದನಾಶೀಲತೆಯಿಂದ ನಡೆದುಕೊಳ್ಳಬೇಕಾಗಿದೆ. ವಿಕಲಚೇತನರ ನ್ಯಾಯಸಮ್ಮತ ಬೇಡಿಕೆಗಳನ್ನು ಸರ್ಕಾರ ತಕ್ಷಣ ಪರಿಗಣಿಸಿ, ಅವರ ಹಕ್ಕು ಮತ್ತು ಸಬಲೀಕರಣಕ್ಕೆ ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಸಂಕಲ್ಪ ವಿಕಲಚೇತನರ ಒಕ್ಕೂಟದ ಜಿಲ್ಲಾಧ್ಯಕ್ಷ ಶಿವಕುಮಾರ್ ಚಲ್ಮಲ್ ಆಗ್ರಹಿಸಿದರು.

## ವಿಶೇಷ ಅಂಚೆ ಜೀವ ವಿಮಾ ಮೇಳ

ನೈಜ್ಯ ದೆಸೆ ನ್ಯೂಸ್

ರಾಯಚೂರು ಅಂಚೆ ವಿಭಾಗದಿಂದ ವಿಶೇಷ ಅಂಚೆ ಜೀವ ವಿಮಾ ಮೇಳ ಇತ್ತೀಚೆಗೆ ಯಶಸ್ವಿಯಾಗಿ ನಡೆಯಿತು. ಈ ಮೇಳಕ್ಕೆ ಜಿಲ್ಲೆಯ ಕೇಂದ್ರ ಹಾಗೂ ರಾಜ್ಯ ಸರ್ಕಾರಿ ನೌಕರರು, ಗ್ರಾಮೀಣ ಅರೆ-ಸರ್ಕಾರಿ ನೌಕರರು, ಆಟೋ ಚಾಲಕರು, ಸಣ್ಣ ಉದ್ಯಮಿಗಳು ಹಾಗೂ ವ್ಯಾಪಾರಸ್ಥರು ಸೇರಿದಂತೆ ವಿವಿಧ ವರ್ಗದ ಸುಮಾರು 490 ಜನರು ಭಾಗವಹಿಸಿದ್ದರು.

ಈ ಮೇಳದ ಮೂಲಕ ಒಟ್ಟು 1.75 ಕೋಟಿ ರೂ. ಪ್ರೀಮಿಯಂ ಸಂಗ್ರಹವಾಗಿದ್ದು, ಕೇಂದ್ರ ಸರ್ಕಾರದ ಜನಪರ ಅಂಚೆ ಜೀವ ವಿಮಾ ಯೋಜನೆಗೆ ಜನರಿಂದ ಭಾರೀ ಸ್ಪಂದನೆ ವ್ಯಕ್ತವಾಗಿದೆ. ಅಂಚೆ ಜೀವ ವಿಮೆ ಯೋಜನೆ ಕಡಿಮೆ



ಪ್ರೀಮಿಯಂನಲ್ಲಿ ಹೆಚ್ಚಿನ ಬೋನಸ್ ಹಾಗೂ ವಿಶ್ವಾಸಾರ್ಹ ಭದ್ರತೆ ನೀಡುವ ಸರಳ ಮತ್ತು ಸುರಕ್ಷಿತ ಯೋಜನೆಯಾಗಿದೆ. ಇದು ಜನರ ಆರ್ಥಿಕ ಭದ್ರತೆಯನ್ನು ಖಚಿತಪಡಿಸುವ ಉದ್ದೇಶದಿಂದ ರೂಪಿಸಲಾದ ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಾಗಿದೆ.

ಮಾರ್ಚ 11ರಂದು ಮತ್ತೆ ಮೇಳ: ಈ ಮಹಾ ಯಶಸ್ಸಿನ ಹಿನ್ನೆಲೆಯಲ್ಲಿ ಜಿಲ್ಲೆಯ ಇನ್ನಷ್ಟು ಜನರಿಗೆ ಯೋಜನೆಯ ಪ್ರಯೋಜನ ತಲುಪಿಸುವ ಉದ್ದೇಶದಿಂದ ರಾಯಚೂರು ಅಂಚೆ ವಿಭಾಗದ ಅಂಚೆ ಅಧೀಕ್ಷಕರಾದ ಶಿವಾನಂದ ಆರ್.ಎಚ್. ಅವರ ಮಾರ್ಗದರ್ಶನದಲ್ಲಿ ಮಾರ್ಚ್ 11ರಂದು ಮತ್ತೊಮ್ಮೆ ವಿಶೇಷ ಅಂಚೆ ಜೀವ ವಿಮಾ ಮೇಳ ಆಯೋಜಿಸಲು ನಿರ್ಧರಿಸಲಾಗಿದೆ. ಜಿಲ್ಲೆಯ ಸಮಸ್ತ ನಾಗರಿಕರು ಈ ಅವಕಾಶವನ್ನು ಸದ್ಬಳಕೆ ಮಾಡಿಕೊಂಡು ಯೋಜನೆಯ ಲಾಭ ಪಡೆಯುವಂತೆ ಮನವಿ ಮಾಡಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಹತ್ತಿರದ ಅಂಚೆ ಕಚೇರಿಯನ್ನು ಸಂಪರ್ಕಿಸಲು ಕೋರಲಾಗಿದೆ ಎಂದು ರಾಯಚೂರು ವಿಭಾಗ ಅಂಚೆ ಅಧೀಕ್ಷಕರಾದ ಶಿವಾನಂದ ಆರ್.ಎಚ್ ಅವರು ತಿಳಿಸಿದ್ದಾರೆ.

## ಕ್ರೀಡೆಗಳ ಮೂಲಕ ಬೆಳಕಿಗೆ ಬನ್ನಿ :ಅಬ್ದುಲ್ ರಜಾಕ್

ನೈಜ್ಯ ದೆಸೆ ನ್ಯೂಸ್

ಕ್ರೀಡೆಗಳ ಮೂಲಕ ವಿದ್ಯಾರ್ಥಿಗಳು ಬೆಳಕಿಗೆ ಬರಬೇಕು ಎಂದು ಭಾರತೀಯ ಪೆಂಕಾಕ್ ಸೀಲಾತ್ ಸಂಸ್ಥೆಯ ತಾಂತ್ರಿಕ ನಿರ್ದೇಶಕರಾದ ಅಬ್ದುಲ್ ರಾಜಾಕ್ ಹೇಳಿದರು.

ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಗುರುವಾರ, ಕೊಪ್ಪಳದ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜು ಹಾಗೂ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯ ಇವರ ಸಹಯೋಗದಲ್ಲಿ 2025-26ನೇ ಸಾಲಿನ ಅಂತರ ಮಹಾವಿದ್ಯಾನಿಲಯಗಳ ಪೆಂಕಾಕ್ ಸೀಲಾತ್ ಪಂದ್ಯಾವಳಿ ಮತ್ತು ವಿಶ್ವವಿದ್ಯಾಲಯ ತಂಡದ ಆಯ್ಕೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.ಇಂದು ಕ್ರೀಡಾ ಕ್ಷೇತ್ರದಲ್ಲಿ ಹೆಚ್ಚಿನ ಸ್ಪರ್ಧೆ ಇದ್ದರೂ ಪೆಂಕಾಕ್ ಸೀಲಾತ್ ಕ್ರೀಡೆಯಲ್ಲಿ ಸ್ಪರ್ಧೆ ಕಡಿಮೆ ಇದೆ.

ಉತ್ತಮ ಪ್ರದರ್ಶನ ನೀಡಿದರೆ ಬಹುಮಾನ ಗಳಿಸುವ ಅವಕಾಶಗಳು ಹೆಚ್ಚು. ಸರ್ಕಾರದಿಂದ ಕ್ರೀಡೆಗಳಿಗೆ ದೊರೆಯುವ



ಅನುದಾನವನ್ನು ಸದುಪಯೋಗಪಡಿಸಿಕೊಂಡು ಕ್ರೀಡೆಗಳ ಮೂಲಕ ಬೆಳವಣಿಗೆ ಸಾಧಿಸಬೇಕು ಎಂದು ಅವರು ಸಲಹೆ ನೀಡಿದರು. ಮುಖ್ಯ ಅತಿಥಿಯಾಗಿ ಭಾಗವಹಿಸಿದ ಪ್ರೊ. ಅಲ್ಲಮ ಪ್ರಭು ಬೆಟ್ಟದೂರು ಮಾತನಾಡಿ, ಗ್ರಾಮೀಣ ಕ್ರೀಡೆಗಳನ್ನು ಉಳಿಸಿ ಬೆಳೆಸುವ ಅಗತ್ಯವಿದೆ. ಗೆಲುವು-ಸೋಲು ಮುಖ್ಯವಲ್ಲ, ಕ್ರೀಡೆಯಲ್ಲಿ ಪಾಲ್ಗೊಳ್ಳುವುದೇ ಮುಖ್ಯ. ವಿದ್ಯಾರ್ಥಿಗಳು ಕಲೆ, ಸಾಹಿತ್ಯ, ಸಂಗೀತ ಮತ್ತು ಕ್ರೀಡೆಗಳತ್ತ ಆಸಕ್ತಿ ಬೆಳೆಸಿಕೊಳ್ಳಬೇಕು ಎಂದು ಹೇಳಿದರು.

ಸಂಘಟನಾ ಕಾರ್ಯದರ್ಶಿ ಹಾಗೂ ದೈಹಿಕ ಶಿಕ್ಷಣ ಉಪನ್ಯಾಸಕರಾದ ಪ್ರದೀಪ್ ಕುಮಾರ ಮಾತನಾಡಿ, ಕ್ರೀಡೆಗಳಲ್ಲಿ ಭಾಗವಹಿಸುವ ಮೂಲಕ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಸಿಗುತ್ತದೆ. ಸರ್ಕಾರಿ ಹುದ್ದೆಗಳಲ್ಲಿ ಕ್ರೀಡಾ ಮೀಸಲಾತಿ ಸೌಲಭ್ಯ ಇರುವುದರಿಂದ ಅದನ್ನು ವಿದ್ಯಾರ್ಥಿಗಳು ಸದುಪಯೋಗಪಡಿಸಿಕೊಳ್ಳಬೇಕು. ಕ್ರೀಡೆಗಳು ಮಾನಸಿಕ, ದೈಹಿಕ ಮತ್ತು ಆರ್ಥಿಕ ಸದೃಢತೆಗೆ ಸಹಕಾರಿಯಾಗುತ್ತವೆ ಎಂದು ಹೇಳಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಕಾಲೇಜಿನ ಪ್ರಾಚಾರ್ಯ ಡಾ. ಗಣಪತಿ ಲಮಾಣಿ ಮಾತನಾಡಿ, ವಿದ್ಯಾರ್ಥಿಗಳು ಹೊಸ ಕ್ರೀಡೆಗಳಲ್ಲಿ ಆಸಕ್ತಿಯಿಂದ ಪಾಲ್ಗೊಳ್ಳಬೇಕು. ಆಧುನಿಕ ಕಾಲದಲ್ಲಿ ಕ್ರೀಡೆಗಳು ಆರೋಗ್ಯ ವೃದ್ಧಿಗೆ ಅತ್ಯಂತ ಅಗತ್ಯವೆಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಬಿ. ಜಿ ಕರಿಗಾರ, ವಿಠಲ ಬಿ ಜಾಬ ಗೌಡರ್, ಎ ಬಸವರಾಜ, ಮಂಜುನಾಥ್ ಅರೇಂಟುನೂರು, ಗವಿಸಿದ್ದಪ್ಪ ಮುತ್ತಾಳ, ಮಂಜುನಾಥ್ ಗೊಂಡಬಾಳು, ವಿನೋದು, ವಿಶ್ವನಾಥ್ ನಡುಕಟ್ಟಿ, ಶುಭ, ಸುಮಿತ್ರಾ ಹಾಗೂ ಸುಮಯ್ಯ ಇತರರು ಉಪಸ್ಥಿತರಿದ್ದರು. ಕಾರ್ಯಕ್ರಮವನ್ನು ಡಾ. ಹುಲಿಗೆಮ್ಮ ಅವರು ನಿರೂಪಿಸಿದರು. ಡಾ. ನರಸಿಂಹ ಸ್ವಾಗತಿಸಿ ವಂದಿಸಿದರು. ಕಾಲೇಜಿನ ವಿದ್ಯಾರ್ಥಿನಿಯರು ಪ್ರಾರ್ಥನೆ ಗೀತೆ ಹಾಡಿದರು.

## ಸನ್ ರೈಸ್ ಕಾಲೇಜಿನಲ್ಲಿ ಫಾರ್ಮಸಿ ಪಿತಾಮಹ ಮಹಾದೇವ್ ಲಾಲ್ ಶ್ರಾಫ್ ಅವರ ಜಯಂತಿ ಆಚರಣೆ

ನೈಜ್ಯ ದೆಸೆ ನ್ಯೂಸ್

ಸಿಂಧನೂರು: ನಗರದ ಸನ್ ರೈಸ್ ಡಿ ಫಾರ್ಮಸಿ, ನರ್ಸಿಂಗ್ ಹಾಗೂ ಪ್ಯಾರಾ ಮೆಡಿಕಲ್ ಕಾಲೇಜಿನಲ್ಲಿ ಫಾರ್ಮಸಿ ಕ್ಷೇತ್ರದ ಪ್ರಮುಖ ವ್ಯಕ್ತಿತ್ವ ಮತ್ತು ಫಾರ್ಮಸಿ ಶಿಕ್ಷಣದ ಅಭಿವೃದ್ಧಿಗೆ ಮಹತ್ವದ ಕೊಡುಗೆ ನೀಡಿದ ಮಹಾದೇವ್ ಲಾಲ್ ಶ್ರಾಫ್ ಅವರ ಜಯಂತಿಯನ್ನು ಗೌರವಪೂರ್ವಕವಾಗಿ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಅವರ ಭಾವಚಿತ್ರಕ್ಕೆ ಹಾರ ಹಾಕಿ ಪುಷ್ಪ ನಮನ ಸಲ್ಲಿಸುವ ಮೂಲಕ ಕಾಲೇಜಿನ ಆಡಳಿತ ಮಂಡಳಿ, ಪ್ರಾಚಾರ್ಯರು, ಉಪನ್ಯಾಸಕರು ಹಾಗೂ ವಿದ್ಯಾರ್ಥಿಗಳು ಗೌರವ ಸಲ್ಲಿಸಿದರು. ಕಾರ್ಯಕ್ರಮದಲ್ಲಿ ಮಾತನಾಡಿದ ಫಾರ್ಮಸಿ ಪ್ರಾಚಾರ್ಯ ವಾಸೀಂ ಹುಸೇನ್ ಅವರು,




ಮಹಾದೇವ್ ಲಾಲ್ ಶ್ರಾಫ್ ಅವರು ದೇಶದಲ್ಲಿ ಫಾರ್ಮಸಿ ಶಿಕ್ಷಣದ ಬಲವರ್ಧನೆಗೆ ಅಪಾರ ಕೊಡುಗೆ ನೀಡಿದ ಮಹನೀಯರು ಎಂದು ಹೇಳಿದರು. ಭಾರತದಲ್ಲಿ ಫಾರ್ಮಸಿ ಶಿಕ್ಷಣವನ್ನು ವ್ಯವಸ್ಥಿತವಾಗಿ ರೂಪಿಸಿ ಅಭಿವೃದ್ಧಿಪಡಿಸುವಲ್ಲಿ ಅವರ ಪಾತ್ರ ಅತ್ಯಂತ ಮಹತ್ವದ್ದಾಗಿದೆ.

ಅವರ ದೃಷ್ಟಿಕೋನ ಮತ್ತು ಶ್ರಮದಿಂದಲೇ ಫಾರ್ಮಸಿ ಶಿಕ್ಷಣ ಇಂದು ದೇಶದಾದ್ಯಂತ



ವ್ಯಾಪಕವಾಗಿ ಬೆಳವಣಿಗೆ ಕಂಡಿದ್ದು ಸಾವಿರಾರು ವಿದ್ಯಾರ್ಥಿಗಳಿಗೆ ಉತ್ತಮ ಉದ್ಯೋಗಾವಕಾಶಗಳು ದೊರಕಲು ಕಾರಣವಾಗಿದೆ ಎಂದು ಅವರು ಅಭಿಪ್ರಾಯಪಟ್ಟರು. ವಿದ್ಯಾರ್ಥಿಗಳು ಮಹಾನ ವ್ಯಕ್ತಿಗಳ ಜೀವನದಿಂದ ಪ್ರೇರಣೆ ಪಡೆದು ತಮ್ಮ ಶಿಕ್ಷಣದಲ್ಲಿ ಪರಿಶ್ರಮ ಮತ್ತು ನಿಷ್ಠೆ ತೋರಿಸಿ ಸಮಾಜ ಸೇವೆಯಲ್ಲಿ ತೊಡಗಿಸಿಕೊಳ್ಳಬೇಕು ಎಂದು ಅವರು ಕರೆ ನೀಡಿದರು. ಸಂಸ್ಥೆಯ ಕಾರ್ಯದರ್ಶಿ ಇರ್ಷಾದ್ ಕೆ ಅವರು ಮಾತನಾಡಿ, ಮಹಾದೇವ್ ಲಾಲ್ ಶ್ರಾಫ್ ಅವರ ಜೀವನ ಸಾಧನೆಗಳು ಯುವಪೀಳಿಗೆಗೆ ಮಾದರಿಯಾಗಿವೆ ಎಂದು ಹೇಳಿದರು.

ಶಿಕ್ಷಣ ಕ್ಷೇತ್ರದಲ್ಲಿ ಅವರು ತೋರಿದ ದಾರಿದೀಪದಂತಿರುವ ಸೇವೆಯನ್ನು ಸದಾ ಸ್ಮರಿಸಬೇಕೆಂದು ಹೇಳಿದರು. ಈ ಸಂದರ್ಭದಲ್ಲಿ ಕಾಲೇಜಿನ ಉಪನ್ಯಾಸಕರು, ಸಿಬ್ಬಂದಿ ವರ್ಗದವರು ಹಾಗೂ ಡಿ ಫಾರ್ಮಸಿ ವಿದ್ಯಾರ್ಥಿಗಳು ಉಪಸ್ಥಿತರಿದ್ದು ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು. ಮಹಾನ್ ವ್ಯಕ್ತಿಯ ಜಯಂತಿಯನ್ನು ಆಚರಿಸುವ ಮೂಲಕ ವಿದ್ಯಾರ್ಥಿಗಳಲ್ಲಿ ಫಾರ್ಮಸಿ ಶಿಕ್ಷಣದ ಮಹತ್ವ ಮತ್ತು ಸೇವಾ ಮನೋಭಾವವನ್ನು ಬಲಪಡಿಸುವ ಪ್ರಯತ್ನ ಮಾಡಲಾಯಿತು.

## ಸಾಹಿತ್ಯ ಸಿಂಚನ

ಕವಿತೆ ಬರೆಯುತ್ತೇನೆ..!

ನಿತ್ಯವೂ ಕವಿತೆಯೆಂಬ
ಹಣತೆ ಹಚ್ಚುತ್ತಿದ್ದೇನೆ..
ಜಗವ ಬೆಳಕಾಗಿಸುತ
ಬೆಳಗಿಸಲಿಕ್ಕಾಗಿ ಅಲ್ಲ..
ದಿನಾ ನನ್ನೊಳಗೊಂದು
ಬೆಳಕು ಮೂಡಿಸಲಿಕ್ಕಾಗಿ.!

ನಿತ್ಯವೂ ಕವಿತೆಯೆಂಬ
ಪ್ರಣತೆ ಬೆಳಗುತ್ತಿದ್ದೇನೆ..
ನಾ ಕಂಡ ಸತ್ಯಗಳ
ಪ್ರತಿಪಾದನೆಗಾಗಿ ಅಲ್ಲ
ಕಾಣದ ಸತ್ಯಗಳಾ
ಅರಿವು ಅನ್ವೇಷಣೆಗಾಗಿ.!

ನಿತ್ಯವೂ ಕವಿತೆಯೆಂಬ
ಭಾವದೊರತೆ ಹರಿಸುತ್ತಿದ್ದೇನೆ
ಬರಡಾದ ಹೃದಯಗಳ
ಹಸಿರಾಗಿಸಲಿಕ್ಕಾಗಿ ಅಲ್ಲ.!
ನನ್ನ ಹೃದಯ ಕೊರಡಾಗದೆ
ಮಿಡಿದು ಉಸಿರಾಡಲಿಕ್ಕಾಗಿ.!

ನಿತ್ಯವೂ ಕವಿತೆಯೆಂಬ
ಅಕ್ಷರದೊರತೆ ಸ್ಫುರಿಸುತ್ತಿದ್ದೇನೆ
ಓದುವವರ ತಿದ್ದುತಲಿ
ಬದಲಾಯಿಸಲಿಕ್ಕಾಗಿ ಅಲ್ಲ
ನನ್ನ ಚಿಂತನೆಗಳ ಜಾಹೀರಾಗಿಸಿ
ತಪ್ಪಿದ್ದರೆ ಬದಲಿಸಿಕೊಳ್ಳಲಿಕ್ಕಾಗಿ.!

ನಿತ್ಯವೂ ಕವಿತೆಯೆಂಬ
ತಪದ ಜೊತೆ ಜೀವಿಸುತ್ತಿದ್ದೇನೆ
ಕಾವ್ಯಲೋಕದಿ ಮಿನುಗುತಲಿ
ಝೇಂಕರಿಸಲಿಕ್ಕಾಗಿ ಅಲ್ಲ
ಅರಿವು ಅಂತಃಕರಣ ಸಾಕ್ಷೀಕರಿಸಿ
ಅಕ್ಷರಜ್ಯೋತಿ ಸಾಕ್ಷಾತ್ಕರಿಸಿಲಿಕ್ಕಾಗಿ.!

ಎ.ಎನ್.ರಮೇಶ್.ಗುಬ್ಬಿ

# ರಂಜಾನ್ ಸಾಮರಸ್ಯದ ಪ್ರತೀಕ: ಸಿ.ಬಿ.ಅಸ್ಕಿ

ನೈಜ್ಯ ದೆಸೆ ನ್ಯೂಸ್

**ತಾಳಿಕೋಟಿ: ಮುಸ್ಲಿಂ ಬಾಂಧವರು ಪವಿತ್ರ ರಮಜಾನ್ ಮಾಸದಲ್ಲಿ ಉಪವಾಸ ವೃತ ಹಾಗೂ ವಿಶೇಷ ಆರಾಧನೆಗಳನ್ನು ಆಚ–ರಿಸುವ ಮೂಲಕ ಭಗವಂತನ ಸಂಪ್ರೀತಿಗೆ ಪಾತ್ರರಾಗುತ್ತಾರೆ. ಇದು ಎಲ್ಲ ಧರ್ಮೀಯರ ಮಧ್ಯೆ ಪ್ರೀತಿ ಮತ್ತು ಸಾಮರಸ್ಯವನ್ನು ಬೆಳೆಸುವ ಮಾಸಾಗಿದೆ ಎಂದು ಅಸ್ಕಿ ಫೌಂಡೇಶನ್ ಕೊಣ್ಣೂರದ ಅಧ್ಯಕ್ಷ ಸಿ.ಬಿ.ಅಸ್ಕಿ ಹೇಳಿದರು.**

ತಾಲೂಕಿನ ಕೊಣ್ಣೂರ ಗ್ರಾಮದಲ್ಲಿ ಪವಿತ್ರ ರಮಜಾನ್ ಮಾಸದ ಅಂಗವಾಗಿ ಫೌಂಡೇಶನ್ ವತಿಯಿಂದ ಗುರುವಾರ ಸಂಜೆ ಹಮ್ಮಿಕೊಂಡ "ಇಫ್ತಾರ ಸೌಹಾರ್ದ ಕೂಟ" ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಕಳೆದ 8 ವರ್ಷಗಳಿಂದ ಇಂತಹ ಸೌಹಾರ್ದ ಭೋಜನ ಕೂಟಗಳನ್ನು ಎರಡೂ ತಾಲೂಕುಗಳಲ್ಲಿ ಆಯೋಜಿಸುತ್ತಾ ಬಂದಿದ್ದೇನೆ ಇದಕ್ಕೆ ಎಲ್ಲಾ ಸಮಾಜ ಬಾಂಧವರ ಸಹಕಾರ ನನಗಿದೆ ನಾವೆಲ್ಲರೂ ಒಂದಾಗಿ ಪ್ರೀತಿ ವಿಶ್ವಾಸದಿಂದ ಬಾಳುತ್ತಾ ದೇಶ ಕಟ್ಟುವ ಕೆಲಸವನ್ನು ಮಾಡಬೇಕಾಗಿದೆ ಎಂದರು.





ಗ್ರಾಮದ ಗಣ್ಯರಾದ ಬಸನಗೌಡ ಹಡಲಗೇರಿ ಹಾಗೂ ಮುಸ್ಲಿಂ ಸಮಾಜದ ಮುಖಂಡ ಮಡಿಕೇಶ್ವರ ಅವರು ಮಾತನಾಡಿ ಸಿ.ಬಿ.ಅಸ್ಕಿ ಅವರು ಜಾತಿ ಮತ ಭೇದವಿಲ್ಲದೆ ಎಲ್ಲರನ್ನೂ ಪ್ರೀತಿಸುವ ಹಾಗೂ ಸಹಕರಿಸುವ ವ್ಯಕ್ತಿಯಾಗಿದ್ದಾರೆ ಅವರು ಮಾಡುತ್ತಿರುವ ಸಮಾಜ ಸೇವಾ ಕಾರ್ಯಗಳು ನಮಗೆಲ್ಲರಿಗೂ ಮಾದರಿ ಯೋಗ್ಯವಾಗಿವೆ ಅವರಿಗೆ ನಾವು ಸಹಕರಿಸೋಣ. ನಾವೆಲ್ಲರೂ ಒಂದು ನಾವೆಲ್ಲರೂ ಭಾರತೀಯರು ಎಂಬ ಭಾವನೆ ಎಲ್ಲರಲ್ಲೂ ಬೆಳೆಯಬೇಕಾಗಿದೆ. ಇಂತಹ ಸೌಹಾರ್ದ ಭೋಜನ ಕೂಟಗಳು ಸಮಾಜದಲ್ಲಿ ಹೆಚ್ಚಾಗಬೇಕಾಗಿದೆ ಎಂದು ಅಭಿಪ್ರಾಯಪಟ್ಟರು.

ಭೋಜನ ಕೂಟದಲ್ಲಿ ಸರ್ವ ಸಮಾಜದ ನೂರಾರು ಜನರು ಭಾಗವಹಿಸಿ ಭಾವೈಕ್ಯತೆಯನ್ನು ಮೆರೆದರು. ಕಾರ್ಯಕ್ರಮದಲ್ಲಿ ಗ್ರಾಮದ ಗಣ್ಯರಾದ ಶಂಕರಗೌಡ ಹಿಪ್ಪರಗಿ, ವಿವೇಕಾನಂದ ದ್ಯಾಪೂರ,ಜಿ.ಜಿ.ಅಸ್ಕಿ, ಅಂಜುಮನ್ ಕಮಿಟಿ ಅಧ್ಯಕ್ಷ ಬಂದೇನವಾಜ ಕಡಕೋಳ, ಜಿ.ಎಸ್.ಹಡಲಗೇರಿ, ಆರ್.ಸಿ.ಪಾಟೀಲ, ಗುರಣ್ಣ ಹತ್ತೂರ, ಅಬ್ದುಲ್ ರೆಹ್ಮಾನ ಅವಟಿ, ಮುದೇಗೌಡ ಹಡಲಗೇ–ರಿ,ಆರ್.ಬಿ.ಬಿರಾದಾರ, ಮಹಮ್ಮದ್ ರಫೀಕ ಚಬನೂರ,ಡಿ.ಬಿ.ಬಿರಾದಾರ, ತಿಪ್ಪಣ್ಣ ಬಡಿಗೇರ, ಎಸ್.ಎಸ್.ಹಡಲಗೇರಿ ಬಸಣ್ಣ ನಾಯ್ಕೋಡಿ ಹಾಗೂ ಅಪಾರ ಸಂಖ್ಯೆಯಲ್ಲಿ ಮಹಿಳೆಯರು ಭಾಗವಹಿಸಿದ್ದರು. ಪತ್ರಕರ್ತ ಅಬ್ದುಲ್ ಗನಿ ಮಕಾನದಾರ ಕಾರ್ಯಕ್ರಮ ನಿರ್ವಹಿಸಿದರು.

# ಮಾರ್ಚ್ 11ರಿಂದ ಅನಿರ್ದಿಷ್ಟಾವಧಿ ಮುಷ್ಕರಕ್ಕೆ ಸರ್ಕಾರಿ ವೈದ್ಯರು ಸಜ್ಜು: ವೈದ್ಯಾಧಿಕಾರಿ ಸಂಘದಿಂದ ಎಸಿಗೆ ಮನವಿ




ನೈಜ್ಯ ದೆಸೆ ನ್ಯೂಸ್

**ಲಿಂಗಸಗೂರು: ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ನೌಕರರ ವಿವಿಧ ಬೇಡಿಕೆ ಗಳನ್ನು ಈಡೇ–ರಿಸದಿದ್ದಲ್ಲಿ ಇಲಾಖೆಯ ಎಲ್ಲಾ ವೃಂದ ಸಂಘ ಗಳ ಸಹಯೋಗದಲ್ಲಿ ಮಾರ್ಚ್ 11ರಿಂದ ಅನಿರ್ದಿಷ್ಟಾವಧಿ ಮುಷ್ಕರ ಹಮ್ಮಿಕೊಳ್ಳಲಾಗುವುದು ಎಂದು ಸರ್ಕಾರಿ ವೈದ್ಯಾಧಿಕಾರಿ ಸಂಘದಿಂದ ಆಸ್ಪತ್ರೆಯ ಮುಖ್ಯ ವೈದ್ಯಾಧಿಕಾರಿ ಡಾ .ರುದ್ರಗೌಡ ಪಾಟೀಲ್ ನೇತೃತ್ವ ದಲ್ಲಿ ಸಹಾಯಕ ಆಯುಕ್ತರಿಗೆ ಮನವಿಯನ್ನು ಸಲ್ಲಿಸಿ ನಂತರ ಮಾತನಾಡಿದ ಅವರು.**

ಎಲ್ಲಾ ಸರ್ಕಾರಿ ಆಸ್ಪತ್ರೆಗಳಿಗೆ ಕಾಲಕಾಲಕ್ಕೆ ಸಮರ್ಪ ಕವಾಗಿ ಇಲಾಖೆಯಿಂದ ಔಷಧಿ ಸರಬರಾಜು ಮಾಡಬೇಕು. ವೃಂದ ಮತ್ತು ನೇಮಕಾತಿ ನಿಯಮಗಳನ್ನು ಪ್ರತಿ 3 ವರ್ಷ ಕ್ಕೊಮ್ಮೆ ತಿದ್ದುಪಡಿ, ಇಲಾಖೆಯ ಎಲ್ಲಾ ವೃಂದಗಳ ಜೇಷ್ಠತಾ ಪಟ್ಟಿಯನ್ನು ಕಾಲಕಾಲಕ್ಕೆ ಪ್ರಕಟಿಸುವುದು, ಎಲ್ಲಾ ವೃಂದದ ಯಾವುದೇ ಅಧಿಕಾರಿ ನೌಕರರಿಗೆ ಮುಂಬಡ್ತಿ ನೀಡುವುದು ಸೇರಿದಂತೆ ವಿವಿಧ ಬೇಡಿಕೆಗಳನ್ನು ಇಟ್ಟುಕೊಂಡು ಮುಷ್ಕರ ನಡೆಸಲಾಗುವುದು ನಮ್ಮ ಬೇಡಿಕೆ ಈಡೇರಿಕೆಗೆ ಹಲವು ಬಾರಿ ಸರ್ಕಾರಕ್ಕೆ ಕೊರಲಾಗಿದೆ. ಆದರೂ ಸರ್ಕಾರ ಸ್ಪಂದಿಸಿಲ್ಲ. ಇದೆ ಮಾರ್ಚ್ 11 ರಿಂದ 15ರ ವರೆಗೆ ರಾಜ್ಯದ ಎಲ್ಲಾ ಜಿಲ್ಲೆಗಳು, ತಾಲ್ಲೂಕು ಆಸ್ಪತ್ರೆ, ಸಮುದಾಯ ಆರೋಗ್ಯ ಕೇಂದ್ರ, ಪ್ರಾಥ–'ಮಿಕ ಆರೋಗ್ಯ ಕೇಂದ್ರದಲ್ಲಿ ಎಲ್ಲಾ ವೈದ್ಯರು,

ನೌಕರರು ಕಪ್ಪುಪಟ್ಟಿ ಧರಿಸಿ ಹೊರ ರೋಗಿಗಳ ಚಿಕಿತ್ಸೆ ಸ್ಥಗಿತ ಗೊಳಿಸಿ ಮುಷ್ಕರ ಹಮ್ಮಿಕೊಳ್ಳ ಲಾಗುವುದು ಎಂದು ಎಚ್ಚರಿಸಿ ದರು. ಮಾರ್ಚ್ 16ರಿಂದ ಎಲ್ಲಾ ಆಸ್ಪತ್ರೆಗಳಲ್ಲಿ ತುರ್ತು ಸೇವೆಗಳನ್ನು ಸ್ಥಗಿತಗೊಳಿಸಿ ಅನಿರ್ದಿಷ್ಟಾವಧಿಗೆ ಗೈರುಹಾಜರಗುವ ಮೂಲಕ ಮುಷ್ಕರ ಮುಂದುವ–ರಿಸಲಾಗುವುದು ಎಂದು ಒತ್ತಾಯಿಸಿದರು .

ಈ ಸಂದರ್ಭದಲ್ಲಿ ತಾಲ್ಲೂಕು ವೈದ್ಯಾಧಿಕಾರಿ ಡಾ. ಅಮರೇಶ ಪಾಟೀಲ್, ನೌಕರರ ಸಂಘದ ಅಧ್ಯಕ್ಷ ಅಜಿಬಾಬ, ಡಾಕ್ಟರ್ ಶ್ವೇತ ನಡುವಿನಮನಿ ಡಾ. ಖಾಜಾ ಹುಸೇನ್ ವೈದ್ಯರು ಸಿಬ್ಬಂದಿಗಳು ಸೇರಿದಂತೆ ಇದ್ದರು.

## ಸಮಾಜ ಕಲ್ಯಾಣ ಇಲಾಖೆಯಿಂದ ಪ್ರತಿಷ್ಠಿತ 6ನೇ ತರಗತಿಗಳ ಪ್ರವೇಶಕ್ಕೆ ಅರ್ಜಿ ಆಹ್ವಾನ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಸಮಾಜ ಕಲ್ಯಾಣ ಇಲಾಖೆಯಿಂದ 2026–27ನೇ ಸಾಲಿಗೆ ಪ್ರತಿಭಾವಂತ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳನ್ನು ಪ್ರತಿಷ್ಠಿತ 6ನೇ ತರಗತಿಗೆ ಶಾಲೆಗಳಿಗೆ ಪ್ರವೇಶಕ್ಕೆ ಅರ್ಹ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.**

ಸಮಾಜ ಕಲ್ಯಾಣ ಇಲಾಖೆ
ಕರ್ನಾಟಕ ಸರ್ಕಾರ

ಆಸಕ್ತರು, ಇಲಾಖೆಯ ವೈಬ್‌ಸೈಟ್ ವಿಳಾಸ: www.sw.kar.nic.in ನಲ್ಲಿ ದಿನಾಂಕ: 15–04–2026 ರಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ. ದಿನಾಂಕ:04–05–2026 ರಂದು ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವಾಗಿರುತ್ತದೆ ಎಂದು ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಸ್ಕಿ ತಾಲೂಕಿನ ಗ್ರಾಮೀಣ ಪ್ರದೇಶದಲ್ಲಿ ಅಕ್ರಮ ಮದ್ಯ ಮಾರಾಟ ತಡೆಯಲು ಒತ್ತಾಯ

ನೈಜ್ಯ ದೆಸೆ ನ್ಯೂಸ್

**ಮಸ್ಕಿ: ಗ್ರಾಮೀಣ ಪ್ರದೇಶದಲ್ಲಿ ಅಕ್ರಮವಾಗಿ ಮದ್ಯ ಮಾರಾಟ ಮಾಡುವುದನ್ನು ತಡೆದು ಅಕ್ರಮ ಮಾರಾಟ ಮಾಡುವವರು ವಿರುದ್ಧ ಅಬಕಾರಿ ಕಾಯ್ದೆ ಅಡಿಯಲ್ಲಿ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಕರ್ನಾಟಕ ರೈತ ಸಂಘದ ನೇತೃತ್ವದಲ್ಲಿ ಮಹಿಳೆಯರು ತಹಸೀಲ್ ಕಛೇರಿ ಸಿಬ್ಬಂದಿಗೆ ಮನವಿ ಪತ್ರ ಸಲ್ಲಿಸಿ ಒತ್ತಾಯಿಸಿದರು.**

ಪಟ್ಟಣದ ತಹಶೀಲ್ದಾರ್ ಕಾರ್ಯಾಲಯದ ಮುಂಭಾಗದಲ್ಲಿ ಮಹಿಳೆಯರು ಕೆಲಕಾಲ ಪ್ರತಿಭಟಿಸಿ ಅಕ್ರೋಶ ವ್ಯಕ್ತಪಡಿಸಿದರು. ಬಳಿಕ ಸಂತೋಷ ಹಿರೇದಿನ್ನಿ ಮಾತನಾಡಿ, ತಾಲೂಕಿನ ಹೂವಿನಭಾವಿ ಗ್ರಾಮದಲ್ಲಿ ಸರಕಾರಿ ಶಾಲೆಯ ಹತ್ತಿರದಲ್ಲಿ ಮದ್ಯವನ್ನು ಮಾರಾಟ ಮಾಡುತ್ತಿರುವದರಿಂದ ಮದ್ಯವ್ಯಸನಿಗಳು ಮದ್ಯದ ಪಾಕೇಟ್ ಮತ್ತು ಬಾಟಲಿಗಳನ್ನು ಶಾಲಾ ಆವರಣದಲ್ಲಿ ಬಿಸಾಡುತ್ತಿರುವದರಿಂದ ಶಾಲಾ ಮಕ್ಕಳ ಮೇಲೆ ಕೆಟ್ಟ ಪರಿಣಾಮ ಬೀರುತ್ತಿದೆ. ತಾಲೂಕಿನ ಬಹುತೇಕ ಗ್ರಾಮೀಣ ಭಾಗದ ಹೋಟೆಲ್, ಟೀ ಅಂಗಡಿ, ಕಿರಾಣಿ ಅಂಗಡಿಗಳಲ್ಲಿ ಅಕ್ರಮವಾಗಿ ಹಗಲು–ರಾತ್ರಿ ಎಗ್ಗಿಲ್ಲದೇ ಮದ್ಯವನ್ನು ಮಾರಾಟ ಮಾಡುತ್ತಿದ್ದಾರೆ.




ಇತ್ತೀಚಿನ ದಿನಗಳಲ್ಲಿ ಯುವಕರು, ವಿದ್ಯಾರ್ಥಿಗಳು ದುಶ್ಚಟಕ್ಕೆ ಬಿದ್ದು, ಸಂಸಾರ ಹಾಳು ಮಾಡಿಕೊಳ್ಳುತ್ತಿದ್ದಾರೆ. ನಶೆಯಲ್ಲಿ ಸುಖಾಸುಮ್ಮನೆ ಗ್ರಾಮದಲ್ಲಿ ಜಗಳವಾಗಿ ವೈಶ್ಯಮ ಉಂಟಾಗಿ ಜನ ಸಾಮಾನ್ಯರಿಗೆ ತೊಂದರೆ ಆಗುತ್ತಿದೆ. ಅಕ್ರಮ ಮದ್ಯ ಮಾರಾಟ ಮಾಡುತ್ತಿರುವ ವ್ಯಕ್ತಿಗಳ ವಿರುದ್ಧ ಕ್ರಮ ಕೈಗೊಳ್ಳಬೇಕು, ಇಲ್ಲವಾದಲ್ಲಿ ರೈತ ಸಂಘಟನೆವಟಿಯಿಂದ ತಹಸೀಲ್ ಕಾರ್ಯಾಲಯದ ಮುಂದೆ ಅನಿರ್ದಿಷ್ಟಾವಧಿ ಧರಣಿ ಸತ್ಯಗ್ರಹ ಹಮ್ಮಿಕೊಳ್ಳಲಾಗುತ್ತದೆ ಎಂದು ಎಚ್ಚರಿಸಿದರು.

ಈ ಸಂದರ್ಭದಲ್ಲಿ ಮಾರುತಿ ಜಿನ್ನಾಪೂರ, ಮಲ್ಲಪ್ಪ, ಗುಂಡಪ್ಪ, ವೆಂಕಟೇಶ ಚಿಲ್ಕರಾಗಿ, ಆದಪ್ಪ ತಳವಾರ, ಶ್ರೀನಿವಾಸ, ಬಾಲಸ್ವಾಮಿ, ಮಾಳಪ್ಪ, ಸಿದ್ದಪ್ಪ, ದುರುಗಪ್ಪ, ಬುಳ್ಳಪ್ಪ, ನಿಂಗಪ್ಪ, ಸಿದ್ದಮ್ಮ, ಗಂಗಮ್ಮ, ಬಸಮ್ಮ, ರೇಣುಕಾ ಸೇರಿದಂತೆ ಇನ್ನಿತರೆ ಮಹಿಳೆಯರಿದ್ದರು.

## ದಿಕ್ಕು ದೆಸೆ ಇಲ್ಲದ ಬಜೆಟ್: ಮುಖಂಡ ಮಾನಸಿಂಗ್

ನೈಜ್ಯ ದೆಸೆ ನ್ಯೂಸ್

**ತಾಳಿಕೋಟಿ: ಮುಖ್ಯಮಂತ್ರಿ ಸಿದ್ದರಾಮಯ್ಯನವರು ವಿಧಾನಸಭೆಯಲ್ಲಿ ಶುಕ್ರವಾರ ಮಂಡಿಸಿದ 2026–27 ನೇ ಸಾಲಿನ ಬಜೆಟ್ ಸಾಲದ ಹೊರೆ ಹೊತ್ತ ಶೂನ್ಯ ಸಾಧನೆಯ ಬಜೆಟ್ ಆಗಿದೆ ಎಂದು ಬಿಜೆಪಿ ಯುವ ಮುಖಂಡ ಮಾನಸಿಂಗ್ ಕೊಕಟನೂರ ಟೀಕಿಸಿದ್ದಾರೆ.**



ಪತ್ರಿಕೆಯೊಂದಿಗೆ ಮಾತನಾಡಿದ ಅವರು ಗ್ಯಾರಂಟಿ ಯೋಜನೆಗಳಿಂದ ಆರ್ಥಿಕ ಹೊರೆಯನ್ನು ಎದುರಿಸುತ್ತಿರುವ ಈ ಸರ್ಕಾರವು ದೊಡ್ಡ ಪ್ರಮಾಣದಲ್ಲಿ ಸಾಲದ ಹೊರೆಯನ್ನು ಹೊತ್ತಿದೆ. ಬಜೆಟ್ ಕೇವಲ ಭರವಸೆಗಳಿಗೆ ಮಾತ್ರ ಸೀಮಿತವಾಗಿದ್ದು ಅನುಷ್ಠಾನಕ್ಕೆ ಬರುವುದು ಕಷ್ಟ ಸಾಧ್ಯ. ವಿಜಯಪುರ ಜಿಲ್ಲೆ ಹಾಗೂ ಅದರಲ್ಲೂ ಮುದ್ದೇಬಿಹಾಳ ಮತಕ್ಷೇತ್ರಕ್ಕೆ ಹೇಳಿಕೊಳ್ಳುವಂತಹ ಯಾವ ಯೋಜನೆಗಳು ಘೋಷಣೆಯಾಗಿಲ್ಲ ಒಟ್ಟಾರೆ ಇದೊಂದು ನಿರುತ್ಸಾಹದ ಬಜೆಟ್ ಎಂದು ಅವರು ತಿಳಿಸಿದರು.

# ಗ್ರಾಂ. ಪಂ ಗೋಂದು ಜೋಳ ಖರೀದಿ ಕೇಂದ್ರ ತೆರೆಯಿರಿ: ರೈತ ಸಂಘ ಮನವಿ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಶೀಘ್ರ ಗತಿಯಲ್ಲಿ ಗ್ರಾಮ ಪಂಚಾಯಿತಿಗೊಂದು ಜೋಳ ಖರೀದಿ ಕೇಂದ್ರ ತೆರೆಯಬೇಕು. ಜೋಳ ಖರೀದಿ ಪ್ರಕ್ರಿಯೆಲ್ಲಿ ನಡೆಯುತ್ತಿರುವ ವಂಚನೆಯನ್ನು ತಡೆಯಬೇಕು' ಎಂದು ಒತ್ತಾಯಿಸಿ ಕರ್ನಾಟಕ ರೈತ ಸಂಘದ ಜಿಲ್ಲಾ ಘಟಕದ ಪದಾಧಿಕಾರಿಗಳು ಸೋಮವಾರ ಜಿಲ್ಲಾಧಿಕಾರಿ ನಿತೀಶ್ ಕೆ.ಅವರಿಗೆ ಮನವಿ ಪತ್ರ ಸಲ್ಲಿಸಿದರು.**

'ಜೋಳ ಕಟಾವು ಕಾರ್ಯ ಮುಗಿದು ಒಂದು ತಿಂಗಳು ಕಳೆದಿದೆ. ಎರಡು ತಿಂಗಳಿನಿಂದ ನೋಂದಣಿ ಕಾರ್ಯದಲ್ಲಿ ಕಾಲಹರಣ ಮಾಡುತ್ತಿರುವುದು ಅತ್ಯಂತ ಖಂಡನೀಯ' ಎಂದು ಆಕ್ರೋಶ ಹೊರಹಾಕಿದರು. 'ಖಾಲಿ ಚೀಲ ಖರೀದಿಸುವ ನೆಪದಲ್ಲಿ ಖರೀದಿ




ಕೇಂದ್ರ ತೆರೆಯದೇ ವಿಳಂಬ ಮಾಡಿರುವುದು ಸರ್ಕಾರ ಹಾಗೂ ಜಿಲ್ಲಾಡಳಿತದ ಬೇಜವಾಬ್ದಾ–ರಿತನಕ್ಕೆ ಸಾಕ್ಷಿಯಾಗಿದೆ. ಕೆಲವು ರೈತರು ಬೆಳೆ ಬೆಳೆಯಲು ಪಡೆದ ಸಾಲ ತೀರಿಸಲು ಹಾಗೂ ಇತರೆ ಕಾರಣಗಳಿಂದ ಖಾಸಗಿ ವ್ಯಾಪಾರಿಗಳಿಗೆ ಕಡಿಮೆ ಬೆಲೆಗೆ ಮಾರಾಟ ಮಾಡಿ ನಷ್ಟಕ್ಕೊಳಗಾಗಿದ್ದಾರೆ. ಸಮಯಕ್ಕೆ ಸರಿಯಾಗಿ ಖರೀದಿ ಕೇಂದ್ರ ತೆರೆಯದ ಕಾರಣದಿಂದ, ಕನಿಷ್ಠ ಬೆಂಬಲ ಬೆಲೆಯ ಲಾಭ ವರ್ತಕರಿಗೆ ದೊರೆಯುತ್ತದೆ' ಎಂದು ಹೇಳಿದರು.

'ರೈತರ ಆರ್ಥಿಕ ದೌರ್ಬಲ್ಯಗಳನ್ನು ದುರುಪಯೋಗಪಡಿಸಿಕೊಳ್ಳುವ ದಲ್ಲಾಳಿಗಳು, ಕಡಿಮೆ ಬೆಲೆಗೆ ಖರೀದಿಸಿ ಅವರ ಹೆಸರಿನಲ್ಲಿ ನೋಂದಣಿ ಮಾಡಿಸಿ ಲಾಭ ಪಡೆದುಕೊಳ್ಳುತ್ತಿದ್ದಾರೆ. ಈ ಭ್ರಷ್ಟಾಚಾರದ ವ್ಯವಹಾರದಲ್ಲಿ ಸ್ಥಳೀಯ ಸೊಸೈಟಿ (ಸಹಕಾರ ಸಂಘಗಳು) ಅಧಿಕಾರಿಗಳು ಮತ್ತು ನೋಡಲ್ ಅಧಿಕಾರಿಗಳು ಶಾಮೀಲಾಗಿದ್ದಾರೆ. ಇಂತಹ ಅಧಿಕಾರಿಗಳು ಖಾಸಗಿ ವ್ಯಾಪಾ–ರಿಗಳೊಂದಿಗೆ ಒಳ ಒಪ್ಪಂದ ಮಾಡಿಕೊಂಡು ಅವ್ಯವಹಾರ ನಡೆಸುತ್ತಿದ್ದಾರೆ' ಎಂದು ದೂರಿದರು. 'ಎರಡು ವರ್ಷಗಳಿಂದ ಅನೇಕ ಬಾರಿ ದೂರು ನೀಡಿದರೂ ಯಾವುದೇ ಕ್ರಮ ಕೈಗೊಂಡಿಲ್ಲ. ಕಳೆದ ವರ್ಷ ತನಿಖಾ ತಂಡ ಸಿಂಧನೂರು ಸೇರಿ ಜಿಲ್ಲೆಯ ಇತರೆ ತಾಲ್ಲೂಕಿಗಳಲ್ಲಿ ತನಿಖೆ ಕೈಗೊಂಡರೂ ಅಕ್ರಮ ಪತ್ತೆಹಚ್ಚಿ ಯಾವ ಅಧಿಕಾರಿಗಳನ್ನೂ ಶಿಕ್ಷೆಗೊಳಪಡಿಸಿರುವುದಿಲ್ಲ.

ಒಳಗಿಂದೊಳಗೆ ಅಕ್ರಮ–ವ್ಯವಹಾರಗಳನ್ನು ವ್ಯವಸ್ಥಿತವಾಗಿ ಮುಚ್ಚಿ ಹಾಕಲಾಯಿತು. ಇಂತಹ ಬೆಳವಣಿಗೆಗಳಿಗೆ ಜಿಲ್ಲಾಡಳಿತವೇ ನೇರ ಹೊಣೆ' ಎಂದು ಆರೋಪಿಸಿದರು. 'ಜಾಗದ ಸಮಸ್ಯೆಯಿಂದ ರೈತರು ತಮ್ಮ ಮನೆಯ ಮುಂದಿನ, ರಸ್ತೆ ಬೀದಿಗಳಲ್ಲಿ ಜೋಳದ ನಿಟ್ಟನ್ನು ಹಾಕಿದ್ದಾರೆ. ಈಗಾಗಲೇ ಜಿಲ್ಲೆಯ ಕೆಲ ಭಾಗದಲ್ಲಿ ಅಕಾಲಿಕ ಮಳೆ ಸುರಿದಿದ್ದರಿಂದ ಜೋಳ ಹಾಳಾಗಿದೆ. ಪುನಃ ಮಳೆ ಬರುವ ಸಾಧ್ಯತೆ ಇರುವುದ–ರಿಂದ ಶೀಘ್ರಗತಿಯಲ್ಲಿ ಖರೀದಿ ಕೇಂದ್ರ ತೆರೆದು ರೈತರನ್ನು ನಷ್ಟದಿಂದ ಪಾರು ಮಾಡಬೇಕಾಗಿದೆ' ಎಂದು ಮನವಿ ಪತ್ರದಲ್ಲಿ ತಿಳಿಸಿದ್ದಾರೆ.

ಕರ್ನಾಟಕ ರೈತ ಸಂಘದ ರಾಜ್ಯ ಘಟಕದ ಅಧ್ಯಕ್ಷ ಡಿ.ಎಚ್.ಪೂಜಾರ, ಜಿಲ್ಲಾ ಘಟಕದ ಅಧ್ಯಕ್ಷ ಅಶೋಕ ನಿಲೋಗಲ್, ಚಿಟ್ಟಿ ಬಾಬು, ರಮೇಶ ಪಾಟೀಲ, ಹುಲಿಗಪ್ಪ ಸಿರವಾರ, ಹನುಮಂತ, ನಾಗರಾಜ ಸಿರವಾರ ಉಪಸ್ಥಿತರಿದ್ದರು.

# ತುಂಗಭದ್ರಾ ನೀರಾವರಿ ಕಾರ್ಮಿಕರ ಸಂಘದಿಂದ ಮಾ.7ರಂದು ನೀರಾವರಿ ಸಮಾವೇಶ: ಕೆ.ನಾಗಲಿಂಗಸ್ವಾಮಿ

ನೈಜ್ಯ ದೆಸೆ ನ್ಯೂಸ್

**ತುಂಗಭದ್ರಾ ನೀರಾವರಿ ಕಾರ್ಮಿಕರ ವಿವಿಧ ಬೇಡಿಕೆಗಳು ಈಡೇರಿಸಲು ಸರ್ಕಾರಕ್ಕೆ ಆಗ್ರಹಿಸಿ ರಾಯಚೂರು ಪಂಡಿತ ಸಿದ್ದರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಮಾ.7ರಂದು ಹಕ್ಕೊತ್ತಾಯ ಸಮಾವೇಶ ಹಮ್ಮಿಕೊಳ್ಳಲಾಗಿದೆ ಎಂದು ಎಐಸಿಸಿಟಿಯು ಕೇಂದ್ರ ಸಮಿತಿ ಮುನಿರಬಾದ್ ಅಧ್ಯಕ್ಷ ಕೆ.ನಾಗಲಿಂಗಸ್ವಾಮಿ ಹೇಳಿದರು.**

ನಗರದ ಪತ್ರಿಕಾ ಭವನದಲ್ಲಿ ಗುರುವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಟಿಬಿ ಡ್ಯಾಂ ನೀರಾವರಿ ಯೋಜನೆ ರಾಜ್ಯದ ಬಹುದೊಡ್ಡ ನೀರಾವರಿ ಅಚ್ಚುಕಟ್ಟು ಪ್ರದೇಶವಾಗಿದೆ. ಕಲ್ಯಾಣ ಕರ್ನಾಟಕ ಭಾಗದ ರಾಯಚೂರು, ಕೊಪ್ಪಳ,




ಬಳ್ಳಾರಿ, ಹಾಗೂ ವಿಜಯನಗರ ಜಿಲ್ಲೆಗಳ ರೈತರ ಜೀವನಾಡಿಯಾಗಿರುವ ಈ ಯೋಜನೆಯಂದ ಲಕ್ಷಾಂತರ ಎಕರೆ ಪ್ರದೇಶವು ನೀರಾವ–ರಿಗೆ ಒಳಪಟ್ಟಿದೆ, ಕಳೆದ 25–30 ವರ್ಷಗಳಿಂದ ಅತ್ಯಂತ ಕಡಿಮೆ ಕೂಲಿಯಿಂದ ಕೆಲಸ ಮಾಡುತ್ತಾ, ಬಂದಿರುವ ಗ್ಯಾಂಗ್ ಮನ್, ವಾಚ್ ಮನ್, ಸವಡಿ, ಕಂಪ್ಯೂಟರ್ ಆಪರೇಟರ್, ಹೌಸ್ ಕೀಪಿಂಗ್, ಸೇರಿದಂತೆ ಇನ್ನಿತರೆ ಹುದ್ದೆಗಳಲ್ಲಿ ಕಾರ್ಮಿಕರು ಹಗಲು ರಾತ್ರಿ ಎನ್ನದೆ, ಕಲ್ಲು ಮುಳ್ಳು, ಹಾವು–ಚೇಳುಗಳನ್ನು ಲೆಕ್ಕಿಸದೆ, ತಮ್ಮ ಜೀವದ ಹಂಗನ್ನೂ ತೊರೆದು ರೈತರ ಜಮೀನುಗಳಿಗೆ ನೀರು ಹರಿಸುವ ಮಹತ್ವದ ಕೆಲಸ ಮಾಡುತ್ತಿದ್ದಾರೆ.

ಇಷ್ಟೆಲ್ಲಾ ಶ್ರಮಪಡುತ್ತಿದ್ದರು ಕೂಡ ಟಿಬಿ ಡ್ಯಾಂ ನೀರಾವರಿ ಕಾರ್ಮಿಕರಿಗೆ ಉದ್ಯೋಗದ ಭದ್ರತೆ ಇಲ್ಲದಂತಾಗಿದೆ. ಹಾಗಾಗಿ ಇದರ ಕು–ರಿತು ಚುನಾಯಿತ ಜನಪ್ರತಿನಿಧಿಗಳು ಹಾಗೂ ಸರ್ಕಾರವನ್ನು ಸಮಾವೇಶದ ಮೂಲಕ ಗಮನ ಸೆಳೆಯಲಾಗುತ್ತಿದೆ ಎಂದು ಹೇಳಿದರು. ಎಐಸಿಸಿಟಿಯು ರಾಜ್ಯ ಸಹ ಕಾರ್ಯದರ್ಶಿ ನಾಗರಾಜ ಪೂಜಾರ್ ಮಾತನಾಡಿ, ಗುತ್ತಿಗೆ ಪದ್ದತಿಯನ್ನು ರದ್ದುಗೊಳಿಸಿ, ತುಂಗಭದ್ರಾ ನೀರಾವರಿ ಅಚ್ಚುಕಟ್ಟು ಪ್ರದೇಶದಲ್ಲಿ ಕೆಲಸ ಮಾಡುತ್ತಿರುವ ಕಾರ್ಮಿಕರನ್ನು ಖಾಯಂಗೊಳಿಸಬೇಕು, ತುಂಗಭದ್ರಾ ನೀರಾವರಿ ಅಚ್ಚುಕಟ್ಟು ಪ್ರದೇಶದಲ್ಲಿ ಕೆಲಸ ಮಾಡುತ್ತಿರುವ ನೀರಾವರಿ ಕಾರ್ಮಿಕರಿಗೆ ಬದುಕುವ ವೇತನ ಇಪಿಎಫ್ ಮತ್ತು ಐಎಸ್‌ಐ ಪ್ರತಿ ತಿಂಗಳು ನಿಗದಿತ ಸಮಯಕ್ಕೆ ಪಾವತಿಸಬೇಕು,

ತುಂಗಭದ್ರಾ ಅಚ್ಚುಕಟ್ಟು ಪ್ರದೇಶದ ನೀರಾವರಿ ಕಾರ್ಮಿಕರಿಗೆ ಕೆಲಸದ ಪರಿಕರ, ಗುರುತಿನ ಚೀಟಿ, ಸಮವಸ್ತ್ರವು ಸೇರಿದಂತೆ ಮೂಲ ಸೌಕರ್ಯ ನೀಡಬೇಕು. ನೀರಾವರಿ ಕಾರ್ಮಿಕರ ಬಾಕಿ ವೇತನ, ಪಿಎಫ್ ಮತ್ತು ಇಎಸ್‌ಐ ಕೂಡಲೇ ಪಾವತಿಸಬೇಕು ಎಂದು ಸರ್ಕಾರಕ್ಕೆ ಆಗ್ರಹಿಸಲು ಸಮಾವೇಶವನ್ನು ಹಮ್ಮಿಕೊಳ್ಳಲಾಗಿದೆ ಎಂದರು.

ಈ ವೇಳೆ: ಎಐಸಿಸಿಟಿಯು ಜಿಲ್ಲಾಧ್ಯಕ್ಷರಾದ ಅಜೀಜ್ ಜಾಗೀರದಾರ್, ಸಿಂಧನೂರು ವಿಭಾಗದ ಅಧ್ಯಕ್ಷ ವಾದಿರಾಜ್ ಕುಲಕರ್ಣಿ, ವೀರೇಶ ಸುಲ್ತಾನಪುರ, ಶರಣಪ್ಪ ಉದ್ಬಾಳ, ಮೊಹಮ್ಮದ್ ಸಾಬ್, ಸಬಾಸ್ಟೀನ್, ದೇವೇಂದ್ರ, ವೆಂಕಟೇಶ ತಿಮ್ಮಾಪುರ, ಹುಸೇನ್ ಸಾಬ್, ಸೇರಿದಂತೆ ಅನೇಕರಿದ್ದರು.

## ನೇಮಕಾತಿ ಪ್ರಕಟಣೆ


ದಾವಣಗೆರೆ ನಗರ ನಿಗಮ ನೇಮಕಾತಿ 2026–15 ನಾಗರಿಕ ಸೇವಕ ಹುದ್ದೆಗಳಿಗೆ ಆಫ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ ದಾವಣಗೆರೆ ನಗರ ನಿಗಮ ನೇಮಕಾತಿ 2026: 15 ನಾಗರಿಕ ಸೇವಕ ಹುದ್ದೆಗಳಿಗೆ ಅರ್ಜಿ ಸಲ್ಲಿಸಿ. ದಾವಣಗೆರೆ ನಗರ ನಿಗಮ ಫೆಬ್ರವರಿ 2026 ರ ಅಧಿಕೃತ ಅಧಿಸೂಚನೆಯ ಮೂಲಕ ನಾಗರಿಕ ಸೇವಕ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ದಾವಣಗೆರೆಯಲ್ಲಿ ವೃತ್ತಿಜೀವನವನ್ನು ಹುಡುಕುತ್ತಿರುವ ಉದ್ಯೋಗಾಕಾಂಕ್ಷಿಗಳು–ಕರ್ನಾಟಕ ಸರ್ಕಾರ ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು 17–ಮಾರ್ಚ್–2026 ರಂದು ಅಥವಾ ಮೊದಲು ಆಫ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು. ಆಫ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ: 18–02–2026 ಆಫ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 17–ಮಾರ್ಚ್–2026 ಅಧಿಕೃತ ವೆಬ್‌ಸೈಟ್: davanagerecity.mrc.gov.in

## ಮಕ್ಕಳ ಉಜ್ವಲ ಭವಿಷ್ಯಕ್ಕಾಗಿ ಮಲ್ಕಾಪುರ ಪ್ರೌಢ ಶಾಲೆ ಪ್ರಾಮಾಣಿಕ ಪ್ರಯತ್ನ ಮಾಡುತ್ತಿದೆ: ಡಾ. ಚನ್ನಬಸವ ಸ್ವಾಮಿ ಹಿರೇಮಠ

ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ತಾಲೂಕಿನ ಮಲ್ಕಾಪುರ ಪ್ರೌಢಶಾಲೆಯಲ್ಲಿ ಸರಸ್ವತಿ ಪೂಜಾ ಕಾರ್ಯಕ್ರಮ ಹಾಗೂ ಎಸ್. ಎಸ್. ಎಲ್. ಸಿ. ವಿದ್ಯಾರ್ಥಿಗಳ ಬೀಳ್ಕೊಡುಗೆ ಸಮಾರಂಭ ಕಾರ್ಯಕ್ರಮ ನೆರವೇರಿತು. ಈ ಕಾರ್ಯಕ್ರಮವು ಶಾಲಾ ಮುಖ್ಯೋ ಪಾಧ್ಯಯರಾದ ಸಂಗಮೇಶ ಕೋಟೆ ಹಾಗೂ ಶಿಕ್ಷಕರುಗಳು ಹಾಗೂ ಎಸ್. ಡಿ. ಎಂ. ಸಿ. ಪದಾಧಿಕಾರಿಗಳ ನೇತೃತ್ವದಲ್ಲಿ ಸರಸ್ವತಿ ಭಾವಚಿತ್ರಕ್ಕೆ ವಿಶೇಷ ಪೂಜೆ ಸಲ್ಲಿಸುವ ಮೂಲಕ ಉದ್ಘಾಟಿಸಲಾಯಿತು.**

ಈ ಕಾರ್ಯಕ್ರಮದಲ್ಲಿ ಸಿಂಧನೂರಿನ ಕಾರುಣ್ಯ ಆಶ್ರಮಕ್ಕೆ ವಿದ್ಯಾರ್ಥಿಗಳು ಹಾಗೂ ಶಿಕ್ಷಕರುಗಳು ಮತ್ತು ತಮ್ಮ ತಮ್ಮ ಕುಟುಂಬದವರ ವಿಶೇಷ ಕಾರ್ಯಕ್ರಮಗಳಲ್ಲಿ ಸಂಗ್ರಹಿಸಿದ ಸುಮಾರು ಐದು ಸಾವಿರ ರೂಪಾಯಿಗಳನ್ನು ಆಶ್ರಮದ ಕಾರ್ಯಾಧ್ಯಕ್ಷರಾದ ಡಾ. ಚನ್ನಬಸವಸ್ವಾಮಿ ಹಿರೇಮಠ ಅವರಿಗೆ ಹಿತರಿಸಿ ಗೌರವಿಸಿ ಸನ್ಮಾನಿಸಿದರು. ಈ ಕಾರ್ಯಕ್ರಮದಲ್ಲಿ ಕಾರುಣ್ಯ ಆಶ್ರಮದ ಕಾರ್ಯಾಧ್ಯಕ್ಷರಾದ ಡಾ.ಚನ್ನಬಸವ ಸ್ವಾಮಿ ಹಿರೇಮಠ ಮಾತನಾಡಿ ಈ ನಮ್ಮ ಮಲ್ಕಾಪುರ ಪ್ರೌಢಶಾಲೆಯ ಶಿಕ್ಷಕರುಗಳು ಮತ್ತು ವಿದ್ಯಾರ್ಥಿಗಳು ತಮ್ಮ ತಮ್ಮ ವಿಶೇಷ ದಿನಗಳನ್ನು



ಕಾರುಣ್ಯ ಕುಟುಂಬಕ್ಕೆ ಸಹಾಯ ಸಹಕಾರ ಮಾಡುವ ಮೂಲಕ ನೆರವೇರಿಸಿಕೊಳ್ಳುತ್ತಿರುವ ಈ ಸಂಪ್ರದಾಯ ನಮಗೆ ಇನ್ನೂ ಹೆಚ್ಚಿನ ಸೇವೆ ಮಾಡಲು ಸ್ಫೂರ್ತಿಯಾಗಿದೆ.

ಮುಂದಿನ ದಿನಮಾನಗಳಲ್ಲಿ ಈ ಶಾಲೆಯ ಎಸ್.ಎಸ್. ಎಲ್. ಸಿ. ವಿದ್ಯಾರ್ಥಿಗಳು ಬರೆದು ಈ ಶಾಲೆಯ ಘನತೆ ಗೌರವವನ್ನು ಎತ್ತಿ ಹಿಡಿಯಲಿ ಎನ್ನುವ ಪ್ರಾರ್ಥನೆ ಕಾರುಣ್ಯ ಕುಟುಂಬದ್ದು. ಈ ಶಾಲೆಯು ಸಂಸ್ಕಾರದ ಶಿಕ್ಷಣದೊಂದಿಗೆ ಸಮಾಜದಲ್ಲಿ ಮಕ್ಕಳ ಉಜ್ವಲ ಭವಿಷ್ಯಕ್ಕಾಗಿ ಶ್ರಮಿಸುತ್ತಿದೆ. ಮತ್ತು ಈ ಶಾಲೆಯ ಎಲ್ಲಾ ಶಿಕ್ಷಕರುಗಳು ನಿರಂತರ ತರಗತಿಗಳನ್ನು ನಡೆಸುವ ಮೂಲಕ ವಿದ್ಯಾರ್ಥಿಗಳ ಏಳಿಗೆಗಾಗಿ ಪ್ರಾಮಾಣಿಕ ಪ್ರಯತ್ನ ಮಾಡುತ್ತಿದ್ದಾರೆ. ಇಂದು ಈ ಕಾರ್ಯಕ್ರಮದಲ್ಲಿ ನನ್ನನ್ನು ಗೌರವಿಸಿ ಸಹಾಯ ಮಾಡಿದ ಕ್ಷಣ ಇತಿಹಾಸದಲ್ಲಿ ಮರೆಯಲಾಗದ ದಿನವಾಗಿದೆ ಎಂದು ಮಾತನಾಡಿ ಎಲ್ಲಾ ವಿದ್ಯಾರ್ಥಿಗಳಿಗೆ ಶಿಕ್ಷಕರುಗಳಿಗೆ ಧನ್ಯವಾದಗಳು ತಿಳಿಸಿದರು.

ಶಿಕ್ಷಕರಾದ ಮಲ್ಲಿಕಾರ್ಜುನ ಸ್ವಾಮಿ ಮುಂದಿನ ದಿನಗಳಲ್ಲಿ ಪರೀಕ್ಷೆ ಬರೆಯುವ ಹತ್ತನೇ ತರಗತಿಯ ವಿದ್ಯಾರ್ಥಿಗಳು ನಮ್ಮ ಶಾಲೆಯ ಕೀರ್ತಿಯನ್ನು ನಾಡಿಗೆ ತೋರಿಸುತ್ತಾರೆ ಎನ್ನುವ ಭರವಸೆ ನಮ್ಮೆಲ್ಲರಿಗಿದೆ. ನಿಮ್ಮೆಲ್ಲರ ಭವಿಷ್ಯ ಸಮಾಜಕ್ಕೆ ಮಾದರಿಯಾಗಲಿ. ಅದೇ ರೀತಿ ಸಮಾಜದಲ್ಲಿ ಇರುವಂತಹ ಹಿರಿಯರನ್ನು ನಿಮ್ಮ ನಿಮ್ಮ ತಂದೆ ತಾಯಿಗಳನ್ನು ಪ್ರೀತಿ ವಿಶ್ವಾಸದಿಂದ ಕಾಣಬೇಕು ಎನ್ನುವ ಆಶಯ ನಮ್ಮೆಲ್ಲಾ ಶಿಕ್ಷಕರಿಗೆ ಇದೆ ಎಂದು ಪ್ರಾಸ್ತಾವಿಕವಾಗಿ ಮಾತನಾಡಿದರು. ಈ ಕಾರ್ಯಕ್ರಮವನ್ನು





ಹತ್ತನೇ ತರಗತಿ ವಿದ್ಯಾರ್ಥಿಯಾದ ಜೆ ಅಶೋಕ ಕುಮಾರ ನಿರೂಪಿಸಿದರು.

ವಿದ್ಯಾರ್ಥಿಗಳಾದ ಮೇಘನಾ ಸಂಗಡಿಗರುಗಳಿಂದ ಪ್ರಾರ್ಥನೆ ಮಾಡಲಾಯಿತು. ಈ ಕಾರ್ಯಕ್ರಮದಲ್ಲಿ ಶಾಲೆಯ ಮುಖ್ಯೋಪಾಧ್ಯಾಯರಾದ ಸಂಗಮೇಶ ಕೋಟೆ ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿಕೊಂಡಿದ್ದರು. ಕಾರ್ಯಕ್ರಮದಲ್ಲಿ ರುದ್ರಪ್ಪ ಎಸ್. ಡಿ.ಎಂ ಸಿ ಅಧ್ಯಕ್ಷರು. ಸುಮಿತ್ರಾ ಎಸ್.ಡಿ.ಎಂ.ಸಿ ಸದಸ್ಯರು. ಹಾಗೂ ಶಾಲೆಯ ಶಿಕ್ಷಕರುಗಳಾದ ಮಲ್ಲಿಕಾರ್ಜುನ ಸ್ವಾಮಿ. ಗೌಡರ ರಾಜಶೇಖರ. ವೆಂಕೋಬ. ರಾಜೇಶ್ವರಿ. ಶೈನಾಜ್ ಬೇಗಂ. ದೇವಿ. ಎಸ್. ಹಾಗೂ ಸ್ಥಳೀಯರಾದ ಲಕ್ಷ್ಮಿ ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಮಾ.8ರಿಂದ ವಿದ್ಯಾನಿಧಿ ತೀರ್ಥರ 162 ನೇ ಆರಾಧನಾ ಮಹೋತ್ಸವ

ನೈಜ್ಯ ದೆಸೆ ನ್ಯೂಸ್

**ತಾಳಿಕೋಟೆ: ತಾಲ್ಲೂಕಿನ ಬಿಳೇಭಾವಿ ಗ್ರಾಮದಲ್ಲಿ ಕಣ್ವಮಠದ 2 ನೇ ಹಾಗೂ 4 ನೇ ಯತಿಗಳಾದ ಅಕ್ಷೋಭ್ಯತೀರ್ಥರು ಹಾಗೂ ವಿದ್ಯಾನಿಧಿತೀರ್ಥರ ವೃಂದಾವನಗಳಿದ್ದು ಮಾಧವತೀರ್ಥ ಮೂಲ ಮಹಾಸಂಸ್ಥಾನಮ್ ಶ್ರೀಮತ್ ಕಣ್ವಮಠ (ವೀರಘಟ್ಟ) ಮಹಾಸಂಸ್ಥಾನ ಹುಣಸಿಹೊಳೆ ಇವರ ಪರಂಪರೆಯಲ್ಲಿ 4ನೇ ಪೀಠಸ್ಥರಾದ ವಿದ್ಯಾನಿಧಿ ತೀರ್ಥರ 162 ನೇ ಆರಾಧನಾ ಮಹೋತ್ಸವವು ಇದೇ ಮಾ.8ರಿಂದ 10ರವರೆಗೆ ಜರುಗಲಿದೆ.**

ಹುಣಸಿಹೊಳೆಯ ಕಣ್ವಮಠದ ಪೀಠಾಧಿಕಾರಿಗಳಾದ ವಿದ್ಯಾ ಕಣ್ವವಿರಾಜ ತೀರ್ಥ ಶ್ರೀಪಾದಂಗಳವರ ದಿವ್ಯ ಸಾನಿಧ್ಯ ವಹಿಸುವರು. ಮಾ.8 ಭಾನುವಾರ ಪೂರ್ವಾರಾಧನೆ, ಮಾ.9 ಸೋಮವಾರ ಮಧ್ಯಾರಾಧನೆ ಹಾಗೂ ಮಾ.10 ಮಂಗಳವಾರ ಉತ್ತರಾಧನೆ ಜರುಗುವುದು. ಪ್ರತಿದಿನ ಬೆಳಿಗ್ಗೆ: 5–00 ಘಂಟೆಗೆ ಸುಪ್ರಭಾತ, ಧರ್ಮ ಧ್ವಜಾರೋಹಣ, ವೇದಘೋಷ, ಯತಿಗಳ ವೃಂದಾವನಗಳಿಗೆ ಅಭಿಷೇಕ, ಲಕ್ಷ ಮಷ್ಪಾರ್ಚನೆ. ರಾಮ ರಾಜ್ಯ ಕಲಾ ಮೇಳದ ಆಧ್ಯಾತ್ಮಿಕ ಮತ್ತು ಸಾಂಸ್ಕೃತಿಕ ಕಾರ್ಯಕ್ರಮ, ಚಂದ್ರಲಾಂಬಾ ಮತ್ತು ಪರ್ಣಿಕಾ ಭಜನಾ ಮಂಡಳಿ ವಿಜಯಪುರ. ಮಹಾಲಕ್ಷ್ಮಿ ಭಜನಾ ಮಂಡಳಿ ತಾಳಿಕೋಟೆ, ಗಾಯತ್ರಿ ಭಜನಾ ಮಂಡಳಿ ತಾಳಿಕೋಟೆ ಇದರಿಂದ ನಾಮ ಸಂಕೀರ್ತನೆ. ಕಣ್ವಮಠದ ಪೀಠಾಧಿಪತಿ ವಿದ್ಯಾ ಕಣ್ವ ವಿರಾಜತೀರ್ಥರಿಂದ ಸಂಸ್ಥಾನಪೂಜೆ. ಶ್ರೀಗಳಿಂದ ಅನುಗ್ರಹ ಸಂದೇಶ, ಮಹಾಮಂಗಳಾರತಿ ತೀರ್ಥ ಪ್ರಸಾದ. ನಡೆಯುವುದು. ಎಂದು ಅಕ್ಷೋಭ್ಯ ತೀರ್ಥರು ಹಾಗೂ ವಿದ್ಯಾನಿಧಿ ತೀರ್ಥರ ಸೇವಾ ಸಮಿತಿ,ಬಿಳೇಭಾವಿ–ನಾಗೂರ ಸಮಸ್ತ ಭಕ್ತ ವೃಂದ ತಿಳಿಸಿದೆ.

## ಒಳ ಮೀಸಲಾತಿ ಜಾರಿಗೆ ಒತ್ತಾಯ: ಮುದ್ದೇಬಿಹಾಳ ಬಂದ್ ಮಾಡಿ ಮಾದಿಗ ಸಮುದಾಯದ ಪ್ರತಿಭಟನೆ




ನೈಜ್ಯ ದೆಸೆ ನ್ಯೂಸ್

**ಮುದ್ದೇಬಿಹಾಳ: ಪರಿಶಿಷ್ಟ ಜಾತಿಗಳ ಒಳ ಮೀಸಲಾತಿ ಜಾರಿಗೊಳಿಸುವಂತೆ ಒತ್ತಾಯಿಸಿ ಹಾಗೂ ಒಳ ಮೀಸಲಾತಿಯನ್ನು ತಪ್ಪಿಸಿ ನೇಮಕಾತಿ ಪ್ರಕ್ರಿಯೆ ನಡೆಸಲು ಸರ್ಕಾರ ಹೊರಡಿಸಿರುವ ಆದೇಶವನ್ನು ಖಂಡಿಸಿ ಶುಕ್ರವಾರ ಪಟ್ಟಣದಲ್ಲಿ ಮಾದಿಗ ಮತ್ತು ಸಂಬಂಧಿತ ಉಪಜಾತಿಗಳ ಸಂಘಟನೆಗಳ ಒಕ್ಕೂಟದ ನೇತೃತ್ವದಲ್ಲಿ ಬೃಹತ್ ಪ್ರತಿಭಟನೆ ನಡೆಯಿತು.**

ಪ್ರತಿಭಟನಾಕಾರರು ಪಟ್ಟಣ ಬಂದ್ ಮಾಡಿ ಆಕ್ರೋಶ ವ್ಯಕ್ತಪಡಿಸಿದರು. ಬೆಳಿಗ್ಗೆಯಿಂದಲೇ ವಿವಿಧ ಸಂಘಟನೆಗಳ ಪದಾಧಿಕಾರಿಗಳು, ಕಾರ್ಯಕರ್ತರು ಹಾಗೂ ಸಮುದಾಯದ ಮುಖಂಡರು ಪಟ್ಟಣದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ನಡೆಸಿ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿದರು. ಒಳ ಮೀಸಲಾತಿ ಜಾರಿಗೊಳಿಸದೆ ನೇಮಕಾತಿ ಪ್ರಕ್ರಿಯೆ ಮುಂದುವರಿಸುವ ಸರ್ಕಾರದ ನಡೆ ಸಾಮಾಜಿಕ ನ್ಯಾಯಕ್ಕೆ ಧಕ್ಕೆ ಉಂಟುಮಾಡುತ್ತಿದೆ ಎಂದು ಅವರು ಆರೋಪಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಮುಖಂಡರು, ಪರಿಶಿಷ್ಟ ಜಾತಿಗಳ ಒಳ ಮೀಸಲಾತಿ ಕುರಿತಂತೆ ಸುಪ್ರೀಂ ಕೋರ್ಟ್ ನೀಡಿದ ನಿರ್ದೇಶನದ ಹಿನ್ನೆಲೆ ರಾಜ್ಯ ಸರ್ಕಾರ ಕಾಯ್ದೆ ರೂಪಿಸಿ ರಾಜ್ಯಪಾಲರಿಂದ ಅಂಕಿತ ಪಡೆದಿರುವುದು ಮಾದಿಗ ಸಮುದಾಯದ ಸುಮಾರು 35 ವರ್ಷಗಳ ಹೋರಾಟಕ್ಕೆ ದೊರೆತ ಐತಿಹಾಸಿಕ ಜಯವಾಗಿದೆ. ಆದರೂ ಒಳ ಮೀಸಲಾತಿ ಜಾರಿಗೊಳಿಸದೆ ನೇಮಕಾತಿ ನಡೆಸಲು ಸರ್ಕಾರ ಮುಂದಾಗಿರುವುದು ಅಸಮಾಧಾನಕ್ಕೆ ಕಾರಣವಾಗಿದೆ ಎಂದು ಹೇಳಿದರು. ಇನ್ನೂ ಸರ್ಕಾರ ಫೆಬ್ರುವರಿ 27ರಂದು ಹೊರಡಿಸಿರುವ ಆದೇಶವನ್ನು ತಕ್ಷಣ ಹಿಂಪಡೆದು, ನ್ಯಾಯಮೂರ್ತಿ ನಾಗಮೋಹನ ದಾಸ್ ಆಯೋಗದ ಶಿಫಾರಸ್ಸಿನಂತೆ ಮಾದಿಗ ಮತ್ತು ಸಂಬಂಧಿತ ಉಪಜಾತಿಗಳಿಗೆ ಒಳ ಮೀಸಲಾತಿ ಕಲ್ಪಿಸಬೇಕು ಎಂದು ಒತ್ತಾಯಿಸಿದರು.

ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳಿಗೆ ಮೀಸಲಾಗಿರುವ ಸಾವಿರಾರು ಹುದ್ದೆಗಳನ್ನು ಒಳ ಮೀಸಲಾತಿ ಆಧಾರದಲ್ಲಿ ಭರ್ತಿ ಮಾಡಬೇಕು ಎಂದು ಆಗ್ರಹಿಸಿದರು. ಸರ್ಕಾರ ತಕ್ಷಣ ಸ್ಪಂದಿಸಿ ಒಳ ಮೀಸಲಾತಿ ಜಾರಿಗೊಳಿಸದಿದ್ದರೆ ರಾಜ್ಯಾದ್ಯಂತ ತೀವ್ರ ಹೋರಾಟ ನಡೆಸಲಾಗುವುದು ಎಂದು ಎಚ್ಚರಿಕೆ ನೀಡಿದರು. ಈ ಹಿನ್ನೆಲೆಯಲ್ಲಿ ಮಾರ್ಚ್ 11ರಂದು "ಬೆಂಗಳೂರು ಚಲೋ" ಹೆಸರಿನಲ್ಲಿ ಬೃಹತ್ ಪ್ರತಿಭಟನೆ ನಡೆಸಲು ನಿರ್ಧರಿಸಲಾಗಿದೆ ಎಂದು ಸಂಘಟನೆಯ ಪದಾಧಿಕಾರಿಗಳು ತಿಳಿಸಿದ್ದಾರೆ. ಪ್ರತಿಭಟನೆಯ ಹಿನ್ನೆಲೆಯಲ್ಲಿ ಪಟ್ಟಣದ ಬಹುತೇಕ ಅಂಗಡಿ–ಮುಂಗಟ್ಟುಗಳು ಬಂದ್ ಆಗಿದ್ದು, ವ್ಯಾಪಾರ ವ್ಯವಹಾರಗಳು ಸ್ಥಗಿತಗೊಂಡಿದ್ದವು. ಪರಿಸ್ಥಿತಿ ನಿಯಂತ್ರಣಕ್ಕಾಗಿ ಪೊಲೀಸರು ಕಟ್ಟುನಿಟ್ಟಿನ ಬಂದೋಬಸ್ತ್ ಏರ್ಪಡಿಸಿದ್ದರು.

ಈ ಸಂದರ್ಭದಲ್ಲಿ ಮಂಜುನಾಥಸ್ವಾಮಿ ಕುಂದರಗಿ, ತಿಪ್ಪಣ್ಣ ದೊಡಮನಿ, ಬಾಲಚಂದ್ರ ಹುಲ್ಲೂರ, ಸುಭಾಸ ಕಾಳಗಿ, ಮುತ್ತಪ್ಪ ಪೂಜಾರಿ, ಮಾರುತಿ ಸಿದ್ದಾಪೂರ, ಆನಂದ ಮುದೂರ, ಬೀಮರಾಯ ಹುಲ್ಲೂರ, ಶೇಖು ಆಲೂರ, ಕೆ.ಬಿ. ದೊಡಮನಿ, ರವಿ ಬಸರಕೋಡ, ಪರಸುರಾಮ ಶಿಂದೆ, ಮಾಹಾಂತೇಶ ಕಂದಗನೂರ, ಹುಲಗೆಪ್ಪ ನಾಗರಬೇಟ್ಟ, ಶ್ರೀದರ ಹಳ್ಳೂರ, ಬಸವರಾಜ ನಾಗರಬೇಟ್ಟ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ರಿಮ್ಸ್ ಹೊರಗುತ್ತಿಗೆ ನೌಕರರ ಪ್ರತಿಭಟನೆ


ನೈಜ್ಯ ದೆಸೆ ನ್ಯೂಸ್

**ರಾಯಚೂರು: ಇಲ್ಲಿಯ ರಾಯಚೂರು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ(ರಿಮ್ಸ್) ಆಸ್ಪತ್ರೆಯಲ್ಲಿ ಕೆಲಸ ಮಾಡುತ್ತಿರುವ ಗುತ್ತಿಗೆ ನೌಕರರ ವೇತನ ಕಡತ, ಬಾಕಿ ವೇತನ ಬಿಡುಗಡೆಗೆ ಒತ್ತಾಯಿಸಿ ಹಾಗೂ ನೌಕರರ ಮೇಲೆ ದೌರ್ಜನ್ಯ ಖಂಡಿಸಿ ರಿಮ್ಸ್ ಹೊರಗುತ್ತಿಗೆ ನೌಕರರು ಗುರುವಾರ ರಿಮ್ಸ್ ಆವರಣದಲ್ಲಿ ಪ್ರತಿಭಟನೆ ನಡೆಸಿದರು.**



ಮೈಸೂರು ಮೂಲದ ಸ್ವಿಸ್‌ಗುತ್ತಿಗೆ ಸಂಸ್ಥೆಯು ನೌಕರರ ವೇತನ ಕಡಿತಗೊಳಿಸಿದರೂ ಪಿಎಫ್, ಇಎಸ್‌ಐ ಹಣವನ್ನು ಸರಿಯಾಗಿ ಜಮಾ ಮಾಡಿಲ್ಲ. ಈ ಮೂಲಕ ಡಿ.ಗ್ರುಪ್ ನೌಕರರಿಗೆ ಅನ್ಯಾಯ ಮಾಡಲಾಗಿದೆ. ಪ್ರತಿ ತಿಂಗಳು ವೇತನ ಪಾವತಿಸುತ್ತಿಲ್ಲ. ಮೂರು, ನಾಲ್ಕು ತಿಂಗಳಿಗೊಮ್ಮೆ ವೇತನ ಕೊಡುತ್ತಿದೆ ಎಂದು ದೂರಿದರು. ಎರಡು ತಿಂಗಳ ವೇತನ ಬಾಕಿ ಇಟ್ಟುಕೊಂಡು ಕೆಲವರಿಗೆ ವೇತನ ಪಾವತಿ ಮಾಡಿದೆ. ಕೆಲವರ ವೇತನದಿಂದ 3 ಸಾವಿರದಿಂದ 5 ಸಾವಿರ ವೇತನ ಕಡಿತಗೊಳಿಸಲಾಗಿದೆ. ಏಜೆನ್ಸಿ ಅವರಿಗೆ ಕೇಳಿದರೆ ಸಮವಸ್ತ್ರ ಬದಲಾಬಣೆಗೆ ಕಡಿತಗೊಳಿಸಿದ್ದೇವೆ ಎಂದು ಉಡಾಫೆಯ ಉತ್ತರ ನೀಡುತ್ತಿದ್ದಾರೆ. ಗುತ್ತಿಗೆ ನೌಕರರಿಗೆ ಅತ್ಯಂತ ಕಡಿಮೆ ವೇತನ ಪಾವತಿ ಮಾಡಲಾಗುತ್ತಿದ್ದು, ಅದರಲ್ಲಿಯೂ ಸಮವಸ್ತ್ರದ ಹೆಸರಿನಲ್ಲಿ ?5 ಸಾವಿರ ಕಡಿತಗೊಳಿಸಿದರೆ ಕುಟುಂಬ ನಿರ್ವಹಣೆ ಮಾಡುವುದಾದರು ಹೇಗೆ' ಎಂದು ಪ್ರಶ್ನಿಸಿದರು. 'ರಿಮ್ಸ್ ಬೋಧಕ ಆಸ್ಪತ್ರೆ ಹಾಗೂ ಮೆಡಿಕಲ್ ಕಾಲೇಜಿನಲ್ಲಿ ಕೆಲಸ ಮಾಡಲು ಸಿಬ್ಬಂದಿಯ ಕೊರತೆ ಇದೆ ಮೂವರ ಕೆಲಸ ಒಬ್ಬರೇ ಮಾಡಬೇಕಿದೆ. ಗುತ್ತಿಗೆ ಸಂಸ್ಥೆಯವರು ಗೌರವಯುತವಾಗಿ ನಡೆದುಕೊಳ್ಳದೇ ಮಾನಸಿಕ ಹಿಂಸೆ ನೀಡುತ್ತಿದ್ದಾರೆ' ಎಂದು ದೂರಿದರು. ಪ್ರತಿಭಟನೆಯಲ್ಲಿ ಹೊರಗುತ್ತಿಗೆ ನೌಕರರಾದ ಆನಂದ, ಪ್ರಶಾಂತ, ರಮೇಶ, ಸಂದೀಪ, ನರೇಶ, ಮಲ್ಲಿಕಾರ್ಜುನ, ವಿನೋದ, ಅನುರಾಧಾ, ಸುನೀತಾ, ಪುಷ್ಪಾ, ಈರಮ್ಮ, ಶ್ರೀನಿವಾಸ, ಅಮರಮ್ಮ, ವಿಶ್ವನಾಥ, ನವೀನಕುಮಾರ ಪಾಲ್ಗೊಂಡಿದ್ದರು.

## ಕಾನೂನು ಸಲಹೆಗಾರರ ನೇಮಕಕ್ಕೆ ಅರ್ಜಿ ಆಹ್ವಾನ



ನೈಜ್ಯ ದೆಸೆ ನ್ಯೂಸ್

**ರಾಯಚೂರು: ಜಿಲ್ಲೆಯ ಕಂದಾಯ ಇಲಾಖೆಯಲ್ಲಿ ಭೂ ಸ್ವಾಧೀನ ಪ್ರಕರಣಗಳಿಗೆ ಸಂಬಂಧಿಸಿದ ವ್ಯಾಜ್ಯಗಳಲ್ಲಿ ಜಿಲ್ಲಾಧಿಕಾರಿಗಳಿಗೆ ಕಾನೂನಿನ ಸಲಹೆ ನೀಡಲು ಕಾನೂನು ಸಲಹೆಗಾರರನ್ನು ನೇಮಿಸಲು ಅರ್ಜಿ ಆಹ್ವಾನಿಸಲಾಗಿದೆ. ಸರ್ಕಾರದ ಆದೇಶಗಳನ್ವಯ ಈ ಹಿಂದೆ ನೇಮಿಸಲಾದ ಕಾನೂನು ಸಲಹೆಗಾರರು ಹುದ್ದೆಗೆ ರಾಜೀನಾಮೆಯನ್ನು ನೀಡಿರುವುದರಿಂದ ಈ ಕಾರ್ಯಾಲಯದಿಂದ ಅಧಿಸೂಚನೆ ಹೊರಡಿಸಿ ಶ್ರೀ ಮಲ್ಲಿಕಾರ್ಜುನಗೌಡ, ನಿವೃತ್ತ ಜಿಲ್ಲಾ ಸಿವಿಲ್ ಮತ್ತು ಸತ್ರ ನ್ಯಾಯಾಧೀಶರು ಇವರನ್ನು ನೇಮಿಸಿ ಆದೇಶಿಸಲಾಗಿತ್ತು, ಆದರೆ ಸದರಿಯವರು ಕರ್ತವ್ಯಕ್ಕೆ ಹಾಜರಾಗಿರುವುದಿಲ್ಲ.**

ಕಾರಣ ಈ ಕಾರ್ಯಾಲಯದ ಕಾನೂನು ಸಲಹೆಗಾರರ ಹುದ್ದೆಯು ಖಾಲಿ ಇರುತ್ತದೆ. ಜಿಲ್ಲಾಧಿಕಾರಿಗಳ ಕಚೇರಿಗಳಲ್ಲಿ ಕಂದಾಯ ಇಲಾಖೆಗೆ ಸಂಬಂಧಿಸಿದ ಭೂಕಂದಾಯ/ ಭೂಮಂಜೂರಾತಿ ನಿಯಮ/ ಭೂಸುಧಾರಣಾ/ ಭೂಸ್ವಾಧೀನ ಕಾಯ್ದೆ/ ನಿಯಮ ಇನ್ನಿತರ ಕಾಯ್ದೆ/ ನಿಯಮಗಳಿಗೆ ಸಂಬಂಧಿಸಿದ ಪ್ರಕರಣಗಳಲ್ಲಿ ಹಾಗೂ ಯಾವುದೇ ನ್ಯಾಯಾಲಯ ವ್ಯಾಜ್ಯಗಳ ಬಗ್ಗೆ ಕಾನೂನು ಸಲಹೆ ನೀಡಲು ಸೃಜಿಸಲಾಗಿರುವ ಕಾನೂನು ಸಲಹೆಗಾರರ ಹುದ್ದೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನಿವೃತ್ತ ನ್ಯಾಯಾಧೀಶರು/ ನಿವೃತ್ತ ಕಂದಾಯ ಇಲಾಖೆಯ ಅಧಿಕಾರಿ (ನಿವೃತ್ತ ವಿಶೇಷ ಜಿಲ್ಲಾಧಿಕಾರಿ) ಗಳಿಗೆ ಕರ್ತವ್ಯಗಳು, ಜವಾಬ್ದಾರಿಗಳನ್ನು ಮತ್ತು ಮೇಲಾಧಿಕಾರಿಗಳ ಸೂಚನೆಗಳು ಕಡ್ಡಾಯವಾಗಿ ಪಾಲಿಸುವ ಷರತ್ತಿಗೊಳಪಟ್ಟು ಕಾನೂನು ಸಲಹೆಗಾರರಿಗೆ ಒಂದು ನಿರ್ದಿಷ್ಟ ಏಕರೂಪದ ಸಂಚಿತ ವೇತನವನ್ನು ನಿಗಧಿಪಡಿಸಿ ಅಂತಹ ವೇತನದ ಮೇರೆಗೆ ಕಾನೂನು ಸಲಹೆಗಾರರಾಗಿ ಕಾರ್ಯನಿರ್ವಹಿಸಲು ಅಸಕ್ತಿಯುಳ್ಳ ನಿವೃತ್ತ ಸರ್ಕಾರಿ/ನ್ಯಾಯಾಂಗ ಇಲಾಖೆಯ ಅಧಿಕಾರಿಗಳನ್ನು ನಿವೃತ್ತ ನ್ಯಾಯಾಧೀಶರು/ ನಿವೃತ್ತ ಕಂದಾಯ ಇಲಾಖೆಯ ಅಧಿಕಾರಿ (ನಿವೃತ್ತ ವಿಶೇಷ ಜಿಲ್ಲಾಧಿಕಾರಿ) ಇವರಿಗೆ 70,000 ರೂ. ಹಾಗೂ ನಿವೃತ್ತ ಕಂದಾಯ ಇಲಾಖೆ ನೌಕರರು (ನಿವೃತ್ತ ತಹಶೀಲ್ದಾರ್ /ಉಪ ತಹಶೀಲ್ದಾರ್) ಇವರಿಗೆ 40,000 ರೂ. ಸಂಚಿತ ವೇತನವನ್ನು ಹಾಗೂ ನಿಗದಿಪಡಿಸಿ ಹೊರ ಗುತ್ತಿಗೆ ಆಧಾರದ ಮೇಲೆ ಈ ಕೆಳಕಂಡ ಷರತ್ತುಗಳನ್ನಯ ನೇಮಿಸಿಕೊಳ್ಳಲು ಉದ್ದೇಶಿಸಲಾಗಿದೆ.

ಅರ್ಹ ಮತ್ತು ಇಚ್ಛೆಯುಳ್ಳ ನಿವೃತ್ತ ಜಿಲ್ಲಾ ನ್ಯಾಯಧೀಶರು ಅಥವಾ ನಿವೃತ್ತ ಹಿರಿಯ ಸಿವಿಲ್ ನ್ಯಾಯಾಧೀಶರು, ನಿವೃತ್ತ ಕಂದಾಯ ಇಲಾಖೆಯ ಅಧಿಕಾರಿ (ನಿವೃತ್ತ ವಿಶೇಷ ಜಿಲ್ಲಾಧಿಕಾರಿ) ನಿವೃತ್ತ ಕಂದಾಯ ಇಲಾಖೆ (ನಿವೃತ್ತ ತಹಶೀಲ್ದಾರ್ /ಉಪ ತಹಶೀಲ್ದಾರ್) ರಿಂದ ಅರ್ಜಿಯನ್ನು ಈ ಅಧಿಸೂಚನೆ ಮೂಲಕ ಆಹ್ವಾನಿಸಲಾಗಿದೆ. ಈ ನೇಮಕಾತಿಯು ನೇಮಕಾತಿ ಆದೇಶದ ದಿನಾಂಕದಿಂದ ಒಂದು ವರ್ಷದ ಅವಧಿಯವರೆಗೆ ಊರ್ಜಿತವಾಗಿರುತ್ತದೆ. ಇಚ್ಛೆಯುಳ್ಳ ನಿವೃತ್ತ ಜಿಲ್ಲಾ ನ್ಯಾಯಧೀಶರು ಅಥವಾ ನಿವೃತ್ತ ಹಿರಿಯ ಸಿವಿಲ್ ನ್ಯಾಯಾಧೀಶರು, ನಿವೃತ್ತ ಕಂದಾಯ ಇಲಾಖೆಯ ಅಧಿಕಾರಿ (ನಿವೃತ್ತ ವಿಶೇಷ ಜಿಲ್ಲಾಧಿಕಾರಿ) ನಿವೃತ್ತ ಕಂದಾಯ ಇಲಾಖೆ (ನಿವೃತ್ತ ತಹಶೀಲ್ದಾರ್ / ಉಪ ತಹಶೀಲ್ದಾರ್) ಅರ್ಜಿಯನ್ನು ಮಾರ್ಚ್ 20ರೊಳಗಾಗಿ ಕಚೇರಿಯ ಸಮಯದೊಳಗಾಗಿ ರಾಯಚೂರು ಜಿಲ್ಲಾಧಿಕಾರಿಗಳ ಕಚೇರಿಗೆ ಸಲ್ಲಿಸಬಹುದಾಗಿದೆ. ಅವಧಿ ಮೀರಿದ ಅರ್ಜಿಗಳನ್ನು ಪುರಸ್ಕರಿಸಲಾಗವುದಿಲ್ಲವೆಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶ್ರೀ ಬಸವೇಶ್ವರ ಸಂಯುಕ್ತ ಪ್ರೌಢ ಶಾಲೆಯಲ್ಲಿ 10 ನೇ ತರಗತಿ ವಿದ್ಯಾರ್ಥಿಗಳ ಬೀಳ್ಕೊಡುಗೆ ಸಮಾರಂಭ

ನೈಜ್ಯ ದೆಸೆ ನ್ಯೂಸ್

**ಬಳಗಾನೂರ: ರಾಯಚೂರು ಜಿಲ್ಲೆಯ ಸಿಂಧನೂರು ತಾಲ್ಲೂಕಿನ ಬಳಗಾನೂರ ಪಟ್ಟಣದ ಶ್ರೀ ಬಸವೇಶ್ವರ ಸಂಯುಕ್ತ ಪ್ರೌಢ ಶಾಲೆಯಲ್ಲಿ ಹತ್ತನೇ ತರಗತಿ ವಿದ್ಯಾರ್ಥಿಗಳ ಬೀಳ್ಕೊಡಿಗೆ ಸಮಾರಂಭ, ಸರಸ್ವತಿ ಪೂಜಾ ಕಾರ್ಯಕ್ರಮ ಸಂಭ್ರಮದೊಂದಿಗೆ ಹಮ್ಮಿಕೊಳ್ಳಲಾಯಿತು. ಕಾರ್ಯಕ್ರಮವನ್ನು ಸರಸ್ವತಿ ದೇವಿಯ ಪೂಜಾ ವಿಧಿಗಳೊಂದಿಗೆ ಆರಂಭಿಸಲಾಯಿತು. ವಿದ್ಯೆಯ ದೇವಿಯಾಗಿರುವ ಸರಸ್ವತಿ ದೇವಿಯ ಆಶೀರ್ವಾದದಿಂದ ವಿದ್ಯಾರ್ಥಿಗಳು ತಮ್ಮ ಮುಂದಿನ ಪರೀಕ್ಷೆಗಳಲ್ಲಿ ಹಾಗೂ ಜೀವನದಲ್ಲಿ ಯಶಸ್ಸು ಸಾಧಿಸಲಿ ಎಂದು ಪ್ರಾರ್ಥಿಸಲಾಯಿತು.**

ಕಾರ್ಯಕ್ರಮದಲ್ಲಿ ಸಂಸ್ಥೆಯ ಅಧ್ಯಕ್ಷರು,



ಕಾರ್ಯದರ್ಶಿಗಳು, ಸರ್ವ ಸದಸ್ಯರು, ಶಿಕ್ಷಕರು, ಸಿಬ್ಬಂದಿ ವರ್ಗದವರು ಹಾಗೂ ವಿದ್ಯಾರ್ಥಿಗಳು ಮತ್ತು ವಿದ್ಯಾರ್ಥಿನಿಯರು ಉಪಸ್ಥಿತರಿದ್ದು ಕಾರ್ಯಕ್ರಮಕ್ಕೆ ವಿಶೇಷ ಮೆರುಗು ತಂದರು. ಈ ಸಂದರ್ಭದಲ್ಲಿ 2024?25ನೇ ಶೈಕ್ಷಣಿಕ ಸಾಲಿನಲ್ಲಿ ಹತ್ತನೇ ತರಗತಿ ಮತ್ತು 7ನೇ ತರಗತಿಯಲ್ಲಿ ಅತೀ ಹೆಚ್ಚು ಅಂಕಗಳನ್ನು ಪಡೆದ ವಿದ್ಯಾರ್ಥಿಗಳನ್ನು ಹಾಗೂ ಅವರ ಪಾಲಕರನ್ನು ಸನ್ಮಾನಿಸಿ ಗೌರವಿಸಲಾಯಿತು. ಶಾಲೆಯ ವತಿಯಿಂದ ಪ್ರಶಸ್ತಿ ಪತ್ರ ಹಾಗೂ ಸ್ಮರಣಿಕೆಗಳನ್ನು ನೀಡಿ ಅಭಿನಂದಿಸಲಾಯಿತು. ವಿದ್ಯಾರ್ಥಿಗಳ ಸಾಧನೆಯನ್ನು ಗುರುತಿಸಿ ಇತರ ವಿದ್ಯಾರ್ಥಿಗಳಿಗೆ ಪ್ರೇರಣೆ ನೀಡಲಾಯಿತು. ಮುಖ್ಯಗುರುಗಳಾದ ಶ್ರೀ ಅಮರನಾಥ ಹಳ್ಳೂರು ಮಾತನಾಡಿ, ವಿದ್ಯಾರ್ಥಿಗಳು ಜೀವನದಲ್ಲಿ ಪರಿಶ್ರಮ, ಶಿಸ್ತು ಮತ್ತು ಸಮಯಪಾಲನೆ ಅಳವಡಿಸಿಕೊಂಡರೆ ಯಶಸ್ಸು ಖಚಿತವಾಗುತ್ತದೆ.

ಪರೀಕ್ಷೆಯನ್ನು ಭಯಪಡದೆ ಧೈರ್ಯದಿಂದ ಎದುರಿಸಿ, ನಿರಂತರ ಅಭ್ಯಾಸದ ಮೂಲಕ ಉತ್ತಮ ಅಂಕಗಳನ್ನು ಪಡೆಯಬೇಕು ಎಂದು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು. ಜೊತೆಗೆ ಗುರುಗಳ ಮಾರ್ಗದರ್ಶನ ಮತ್ತು ಪೋಷಕರ ಆಶೀರ್ವಾದ ವಿದ್ಯಾರ್ಥಿಗಳ ಯಶಸ್ಸಿಗೆ ಮುಖ್ಯವಾದ ಅಂಶಗಳೆಂದು ತಿಳಿಸಿದರು. ಕಾರ್ಯಕ್ರಮದ ಅಂಗವಾಗಿ ವಿದ್ಯಾರ್ಥಿಗಳಿಂದ ಹಾಡು, ನೃತ್ಯ, ನಾಟಕ ಹಾಗೂ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆದವು. ವಿದ್ಯಾರ್ಥಿಗಳು ತಮ್ಮ ಪ್ರತಿಭೆಯನ್ನು ಪ್ರದರ್ಶಿಸಿ ಎಲ್ಲರ ಮನಸೆಳೆದರು.

ಹತ್ತನೇ ತರಗತಿ ವಿದ್ಯಾರ್ಥಿಗಳು ಶಾಲೆಯಲ್ಲಿನ ತಮ್ಮ ಅನುಭವಗಳನ್ನು ಹಂಚಿಕೊಂಡು ಶಿಕ್ಷಕರಿಗೆ ಹಾಗೂ ಶಾಲಾ ಆಡಳಿತ ಮಂಡಳಿಗೆ ಕೃತಜ್ಞತೆ ಸಲ್ಲಿಸಿದರು. ಈ ಸಮಾರಂಭವು ವಿದ್ಯಾರ್ಥಿಗಳ ಜೀವನದಲ್ಲಿ ಸ್ಮರಣೀಯ ಕ್ಷಣವಾಗಿ ಉಳಿದು, ಶಾಲೆಯಲ್ಲಿನ ಶಿಕ್ಷಣದ ಜೊತೆಗೆ ಸಂಸ್ಕಾರ ಮತ್ತು ಮೌಲ್ಯಗಳ ಮಹತ್ವವನ್ನು ಪ್ರತಿಪಾದಿಸಿತು. ಕಾರ್ಯಕ್ರಮದ ಕೊನೆಯಲ್ಲಿ ಶಿಕ್ಷಕರು ಮತ್ತು ವಿದ್ಯಾರ್ಥಿಗಳು ಪರಸ್ಪರ ಶುಭಾಶಯ ವಿನಿಮಯ ಮಾಡಿಕೊಂಡು ಸಮಾರಂಭವನ್ನು ಯಶಸ್ವಿಯಾಗಿ ಸಮಾಪಿಸಿದರು.

## ಶಿಕ್ಷಣ ಮಾರ್ಗದರ್ಶಿ ವಿಶೇಷ

### ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯುನಿಕೇಶನ್ ಇಂಜಿನಿಯರಿಂಗ್

ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯುನಿಕೇಶನ್ ಇಂಜಿನಿಯರಿಂಗ್ (ECE) ಕೋರ್ಸ್ 4 ವರ್ಷಗಳ ಅವಧಿಯ ಪದವಿ (BE/B.Tech) ಅಥವಾ 3 ವರ್ಷಗಳ ಡಿಪ್ಲೊಮಾ ಆಗಿದೆ. ಇದು ಸರ್ಕ್ಯೂಟ್‌ಗಳು, ಎಲೆಕ್ಟ್ರಾನಿಕ್ಸ್ ಮತ್ತು ಸಂವಹನ ಎಂಜಿನಿಯರಿಂಗ್ ಎಂಜಿನಿಯರಿಂಗ್‌ನ ಅತ್ಯಂತ ಜನಪ್ರಿಯ ಶಾಖೆಗಳಲ್ಲಿ ಒಂದಾಗಿದೆ, ಇದು ಎಲೆಕ್ಟ್ರಾನಿಕ್ ಉಪಕರಣಗಳ ಸಂಶೋಧನೆ, ವಿನ್ಯಾಸ, ಅಭಿವೃದ್ಧಿ, ಪರೀಕ್ಷೆ ಮತ್ತು ನಿರ್ವಹಣೆಯನ್ನು ಒಳಗೊಂಡಿರುತ್ತದೆ. ಎಲೆಕ್ಟ್ರಾನಿಕ್ಸ್ ಮತ್ತು ಸಂವಹನ ಎಂಜಿನಿಯರ್‌ಗಳು ಸಂವಹನ ಮತ್ತು ಪ್ರಸಾರ ವ್ಯವಸ್ಥೆಗಳ ಜೋಡಣೆ ಮತ್ತು ಉತ್ಪಾದನೆಯನ್ನು ಸಹ ಮೇಲ್ವಿಚಾರಣೆ ಮಾಡುತ್ತಾರೆ. ಎಲೆಕ್ಟ್ರಾನಿಕ್ಸ್ ಮತ್ತು ಸಂವಹನ ಎಂಜಿನಿಯರಿಂಗ್ ಕ್ಷೇತ್ರವು ಮೂರು ಪ್ರಮುಖ ತಾಂತ್ರಿಕ ಕ್ಷೇತ್ರಗಳಲ್ಲಿ ತನ್ನ ಅಡಿಪಾಯವನ್ನು ಹೊಂದಿದೆ: ಗಣಿತ: ಮಾಹಿತಿ, ನೆಟ್‌ವರ್ಕ್‌ಗಳು ಮತ್ತು ವ್ಯವಸ್ಥೆಗಳು, ಭೌತಶಾಸ್ತ್ರ: ಸರ್ಕ್ಯೂಟ್‌ಗಳು, ಸೆಮಿಕಂಡಕ್ಟರ್ ಸಾಧನಗಳು ಮತ್ತು ಆಪ್ಟಿಕಲ್ ವ್ಯವಸ್ಥೆಗಳು, ಮತ್ತು ಕಂಪ್ಯೂಟರ್‌ಗಳು: ಮೈಕ್ರೋಪ್ರೊಸೆಸರ್‌ಗಳು ಮತ್ತು ಕಂಪ್ಯೂಟಿಂಗ್ ಸಾಧನಗಳು. ಎಲೆಕ್ಟ್ರಾನಿಕ್ ಸಾಧನಗಳು, ಸಂವಹನ ವ್ಯವಸ್ಥೆಗಳು (communication systems), ಮತ್ತು ಸಾಫ್ಟ್‌ವೇರ್ ಏಕೀಕರಣದ ಬಗ್ಗೆ ಕಲಿಸುತ್ತದೆ. ಈ ಕೋರ್ಸ್ ಐಟಿ (IT), VLSI, ಎಂಬೆಡೆಡ್ ಸಿಸ್ಟಮ್ಸ್ ಮತ್ತು ದೂರಸಂಪರ್ಕ ಕ್ಷೇತ್ರಗಳಲ್ಲಿ ಉದ್ಯೋಗಾವಕಾಶಗಳನ್ನು ನೀಡುತ್ತದೆ. ಕರ್ನಾಟಕ ಸರ್ಕಾರ ಕರ್ನಾಟಕ ಸರ್ಕಾರ ಕೋರ್ಸ್ ವಿವರಗಳು (Course Details): ಅರ್ಹತೆ (Eligibility): PUC ಅಥವಾ 12ನೇ ತರಗತಿಯಲ್ಲಿ ಭೌತಶಾಸ್ತ್ರ (Physics), ರಸಾಯನಶಾಸ್ತ್ರ (Chemistry), ಮತ್ತು ಗಣಿತ (Mathematics) ವಿಷಯಗಳೊಂದಿಗೆ ತೇರ್ಗಡೆಯಾಗಿರಬೇಕು. ಅವಧಿ (Duration): 4 ವರ್ಷಗಳು (8 ಸೆಮಿಸ್ಟರ್‌ಗಳು). ಪ್ರಮುಖ ವಿಷಯಗಳು (Core Subjects): ಸರ್ಕ್ಯೂಟ್ ವಿಶ್ಲೇಷಣೆ (Circuit Analysis) ಡಿಜಿಟಲ್ ಮತ್ತು ಅನಲಾಗ್ ಎಲೆಕ್ಟ್ರಾನಿಕ್ಸ್ (Digital & Analog Electronics) ಸಿಗ್ನಲ್ಸ್ ಮತ್ತು ಸಿಸ್ಟಮ್ಸ್ (Signals & Systems) ಮೈಕ್ರೊಪ್ರೊಸೆಸರ್ ಮತ್ತು ಮೈಕ್ರೊಕಂಟ್ರೋಲರ್ (Microprocessors & Microcontrollers) ಸಂವಹನ ವ್ಯವಸ್ಥೆಗಳು (Communication Systems - Satellites, Fibers) ಗಿಖಖ ವಿನ್ಯಾಸ ಮತ್ತು ಎಂಬೆಡೆಡ್ ಸಿಸ್ಟಮ್ಸ್ ಕೌಶಲ್ಯಗಳು (Skills Developed): ಹಾರ್ಡ್‌ವೇರ್ ವಿನ್ಯಾಸ ಮತ್ತು ಪರೀಕ್ಷೆ. ಸಂವಹನ ವ್ಯವಸ್ಥೆಗಳನ್ನು ವಿನ್ಯಾಸಗೊಳಿಸುವುದು. ಉದ್ಯೋಗಾವಕಾಶಗಳು :ಸರ್ಕಾರಿ ವಲಯ: ISRO, DRDO, BEL, BHEL, AIR, Indian Telephone Industrie. ಖಾಸಗಿ ವಲಯ: ಟೆಲಿಕಾಂ ಕಂಪನಿಗಳು (Jio, Airtel), ಸಾಫ್ಟ್‌ವೇರ್ ಕಂಪನಿಗಳು (TCS, Infosys), ಹಾರ್ಡ್‌ವೇರ್ ಉತ್ಪಾದನಾ ಕಂಪನಿಗಳು, VLSI ವಿನ್ಯಾಸ ಸಂಸ್ಥೆಗಳು.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

# ಅಭಿವೃದ್ಧಿ ಕಾಮಗಾರಿಗಳಿಗೆ ನಾಡಗೌಡ ಚಾಲನೆ

**ನೈಜ್ಯ ದೆಸೆ ನ್ಯೂಸ್**

**ಮುದ್ದೇಬಿಹಾಳ: ಕ್ಷೇತ್ರದ ಜನರ ದೀರ್ಘಕಾಲದ ಬೇಡಿಕೆಗಳಿಗೆ ಸ್ಪಂದಿಸುವುದು ನಮ್ಮ ಆದ್ಯತೆಯಾಗಿದ್ದು, ಹಂತ ಹಂತವಾಗಿ ಎಲ್ಲಾ ರಸ್ತೆಗಳನ್ನು ಸಂಪೂರ್ಣ ಡಾಂಬರೀಕರಣ ಮಾಡುವ ಮೂಲಕ ಶಾಶ್ವತ ಪರಿಹಾರ ಕಲ್ಪಿಸಲಾಗುವುದು ಎಂದು ಶಾಸಕ ಹಾಗೂ ಕೆಎಸ್‌ಡಿಎಲ್ ನಿಗಮದ ಅಧ್ಯಕ್ಷ ಸಿ.ಎಸ್. ನಾಡಗೌಡ (ಅಪ್ಪಾಜಿ) ಹೇಳಿದರು.**

ತಾಲೂಕಿನ ಯರಗಲ್ಲ, ದೇವೂರ, ರಕ್ಕಸಗಿ ಹಾಗೂ ಕಾರಕೂರ ಗ್ರಾಮಗಳಲ್ಲಿ ಗುರುವಾರ ಹಮ್ಮಿಕೊಂಡಿದ್ದ ವಿವಿಧ ಅಭಿವೃದ್ಧಿ ಕಾಮಗಾರಿಗಳ ಭೂಮಿ ಪೂಜೆ ನೆರವೇರಿಸಿ ಅವರು ಮಾತನಾಡಿದರು. ಈ ಸಂದರ್ಭದಲ್ಲಿ ಒಟ್ಟು ಸುಮಾರು ?5.80 ಕೋಟಿ ಮೊತ್ತದ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಲಾಯಿತು. ಯರಗಲ್ಲ?ದೇವೂರ ರಸ್ತೆ ಅಭಿವೃದ್ಧಿಗೆ 4.60 ಕೋಟಿ, ರಕ್ಕಸಗಿ ಗ್ರಾಮದಲ್ಲಿ ಸಮುದಾಯ ಭವನ ನಿರ್ಮಾಣಕ್ಕೆ 1 ಕೋಟಿ ಹಾಗೂ ಕಾರಕೂರ ಗ್ರಾಮದಲ್ಲಿ 20 ಲಕ್ಷ ವೆಚ್ಚದ ವಿವಿಧ ಕಾಮಗಾರಿಗಳಿಗೆ ಭೂಮಿ ಪೂಜೆ ನೆರವೇರಿಸಲಾಯಿತು. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನೇತೃತ್ವದ ರಾಜ್ಯ ಸರ್ಕಾರ ಪಂಚ ಗ್ಯಾರಂಟಿ ಯೋಜನೆಗಳ ಮೂಲಕ ಜನಪರ ಆಡಳಿತ ನೀಡುತ್ತಿದೆ.



**"ಸದ್ಯ ಲಭ್ಯವಿರುವ ಅನುದಾನದಲ್ಲಿ ಯರಗಲ್ಲ ದೇವೂರ ರಸ್ತೆಯನ್ನು ಸುಸ್ಥಿತಿಗೆ ತರಲಾಗುತ್ತಿದೆ. ಮುಂದಿನ ದಿನಗಳಲ್ಲಿ ಸಂಪೂರ್ಣ ಡಾಂಬರೀಕರಣಗೊಳಿಸಲಾಗುವುದು." ಸಿ.ಎಸ್. ನಾಡಗೌಡ, ಶಾಸಕ ಹಾಗೂ ಕೆಎಸ್‌ಡಿಎಲ್ ನಿಗಮದ ಅಧ್ಯಕ್ಷರು.**

ಹಿಂದಿನ ಸರ್ಕಾರ ಬಿಟ್ಟಿದ್ದ ಸಾಲದ ಹೊರೆಯನ್ನು ಸಹ ಸಮರ್ಥವಾಗಿ ನಿರ್ವಹಿಸಲಾಗುತ್ತಿದೆ ಎಂದು ಅವರು ಹೇಳಿದರು. ವಿವಿಧ ಸರ್ಕಾರಿ ಇಲಾಖೆಗಳಲ್ಲಿನ 15 ರಿಂದ 20 ಸಾವಿರ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಸಿದ್ಧತೆ ನಡೆಸಿದೆ. ಮುಂಬರುವ ಬಜೆಟ್ ಜನರ ಹಿತದೃಷ್ಟಿಯಿಂದ ಉತ್ತಮವಾಗಿರಲಿದೆ ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದರು. ಈ ಸಂದರ್ಭದಲ್ಲಿ ಯರಗಲ್ಲ ಗ್ರಾಮದ ಸರ್ಕಾರಿ ಶಾಲೆಗೆ ಹೊಸ ಕಟ್ಟಡ ಹಾಗೂ ಅಡಿಗೆ ಕೋಣೆ ನಿರ್ಮಾಣದ ಬೇಡಿಕೆಯನ್ನು ಗ್ರಾಮಸ್ಥರು ಸಲ್ಲಿಸಿದರು. ಅದನ್ನು ಮುಂದಿನ ದಿನಗಳಲ್ಲಿ ಈಡೇರಿಸಲು ಪ್ರಯತ್ನಿಸಲಾಗುವುದು ಎಂದು ಶಾಸಕರು ಭರವಸೆ ನೀಡಿದರು.

ಕಾರ್ಯಕ್ರಮದಲ್ಲಿ ಬಾಲಾಜಿ ಶುಗರ್ಸ್ ಮುಖ್ಯಸ್ಥ ರಾಹುಲಗೌಡ ಪಾಟೀಲ, ನಿರ್ದೇಶಕ ಶ್ರೀನಿವಾಸ ಅರಕೇರಿ, ಸಾರ್ವಜನಿಕ ಸಂಪರ್ಕ ಅಧಿಕಾರಿ ಮಾರುತಿ ಗುರವ, ಬಸವರಾಜ ಡಮನಾಳ, ಶಾಂತಗೌಡ ಪಾಟೀಲ, ಕುಮಾರ ಕಡಿ, ಮಹಾಂತೇಶ್ ವಾಲಿ, ಭೀಮರಾವ್ ಹಳ್ಳೂರ, ಆಲೂರು ಗ್ರಾಮ ಪಂಚಾಯಿತಿ ಪಿಡಿಓ ರಾಜು ನಾರಾಯಣ, ಕೆಆರ್‌ಐಡಿಎಲ್ ಇಂಜಿನಿಯರ್ ನಾಗರಾಜ್ ಬಿರಾದಾರ, ರಕ್ಕಸಗಿ ಪಿಡಿಓ ಮಾಲಾಶ್ರೀ ಅಮ್ಮನ್ನವರು ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಗ್ರಾಮಗಳ ಉದ್ದಾರವೇ ದೇಶದ ಉದ್ದಾರ :ವೀರಭದ್ರಯ್ಯ ಹಿರೇಮಠ




**ನೈಜ್ಯ ದೆಸೆ ನ್ಯೂಸ್**

**ಮಾನ್ವಿ: ತಾಲೂಕಿನ ಕರಡಿಗುಡ್ಡ ಗ್ರಾಮದಲ್ಲಿ ಶ್ರೀ ವೆಂಕಟೇಶ್ವರ ಪದವಿ ಮಹಾವಿದ್ಯಾಲಯದ ವತಿಯಿಂದ ನಡೆದ ರಾಷ್ಟ್ರೀಯ ಸೇವಾ ಯೋಜನೆಯ ವಾರ್ಷಿಕ ಶಿಬಿರದ 3 ನೇ ದಿನದ ಕಾರ್ಯಕ್ರಮದಲ್ಲಿ ವೀರಭದ್ರಯ್ಯ ಹಿರೇಮಠ ಪ್ರಾಚಾರ್ಯರು ವಿಶೇಷ ಉಪನ್ಯಾಸ ನೀಡಿ ಗ್ರಾಮ ಸ್ವಚ್ಛತೆಯಲ್ಲಿ ಯುವಕರ ಪಾತ್ರದ ಕುರಿತು ಮಾತನಾಡಿ ಗ್ರಾಮೀಣ ಭಾಗದಲ್ಲಿ ಸ್ವಚ್ಛತೆಯ ಬಗ್ಗೆ ಅರಿವನ್ನು ಮೂಡಿಸಿಕೊಳ್ಳಬೇಕಾದರೆ ಪರಿಸರದ ಸ್ವಚ್ಛತೆ, ಆರೋಗ್ಯದ ಜಾಗೃತಿ ಹಾಗೂ ಮಾನಸಿಕ ಸ್ವಚ್ಛತೆಯ ಬಗ್ಗೆ ಗ್ರಾಮೀಣ ಭಾಗದ ಜನರಿಗೆ ಅರಿವು ಮೂಡಿಸುವುದರಿಂದಿಗೆ ಸಂಸ್ಕೃತಿ ಹಾಗೂ ಸಂಸ್ಕಾರದ ಗ್ರಾಮೀಣ ಭಾಗದ ಮೂಲ ನೆಲೆ ಅದನ್ನು ಕಾಪಾಡಿ ಕೊಳ್ಳುವುದರ ಜೊತೆಗೆ ಗ್ರಾಮದಲ್ಲಿ ಕಸ ವಿಲೇವಾರಿ ಮಾಡುವಾಗ ಒಣ ಕಸ ಮತ್ತು ಹಸಿ ಕಸ ಹೇಗೆ ವಿಂಗಡಿಸಬೇಕು ಎಂದು ಗ್ರಾಮೀಣ ಜನರಿಗೆ ಶಿಬಿರಾರ್ಥಿಗಳು ಜಾಗೃತಿಯನ್ನು ಮೂಡಿಸಬೇಕೆಂದು ತಿಳಿಸಿದರು.**

ಸಂಸ್ಕಾರ ಮತ್ತು ಸಂಸ್ಕೃತಿಯು ಯಾರಲ್ಲಿ ಇರುತ್ತೆ ಅವರು ಉತ್ತಮವಾದ ಬದಕನ್ನು ಕಟ್ಟಿಕೊಳ್ಳುತ್ತಾರೆ ಎಂದು ಹೇಳಿದರು. ಉದ್ಘಾಟಕರಾಗಿ ಆಗಮಿಸಿ ಕಾರ್ಯಕ್ರಮವನ್ನು ಉದ್ಘಾಟಿಸಿ ನಾರಾಯಣ ಮುಖ್ಯ ಗುರುಗಳು ಮಾತನಾಡಿ ರಾಷ್ಟ್ರೀಯ ಸೇವಾ ಯೋಜನೆ ಮಾಡುವ ಉದ್ದೇಶವೇನೆಂದರೆ ಸ್ವಯಂ ಪ್ರೇರಿತರಾಗಿ ಕೆಲಸವನ್ನು ಮಾಡಬೇಕು, ರಾಷ್ಟ್ರ ಪ್ರೇಮ ಹಾಗೂ ದೇಶಭಿಮಾನವನ್ನು ಪ್ರತಿಯೊಬ್ಬರಲ್ಲಿ ಮೂಡಿಸಿಕೊಳ್ಳಬೇಕೆಂದು ಎಂದು ಹೇಳಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿ ಡಾ. ಹುಲಿಯಪ್ಪ ದುಮತಿ ಮಾತನಾಡಿ ಮನುಷ್ಯನ ಮನುಸ್ಸು ಸ್ವಚ್ಛವಾಗಿದ್ದರೆ ದೇಶ ಸ್ವಚ್ಛತೆಯಿಂದ ಇರುತ್ತದೆ.ಗ್ರಾಮೀಣ ಭಾಗದಲ್ಲಿ ಸ್ವಚ್ಛತೆಯ ಬಗ್ಗೆ ಯುವಕರಲ್ಲಿ ಜಾಗೃತಿಯನ್ನು ಮೂಡಿಸಬೇಕು ಎಂದು ಹೇಳಿದರು.ಈ ಕಾರ್ಯಕ್ರಮದಲ್ಲಿ ಕಾಲೇಜಿನ ಪ್ರಾಚಾರ್ಯರಾದ ಶಂಕ್ರಪ್ಪ ಅಂಗಡಿ, ರಾಘವೇಂದ್ರ ನಾಯಕ ಪ್ರಾಧ್ಯಾಪಕರು ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿದರು. ಕಾಲೇಜಿನ ಉಪನ್ಯಾಸಕರಾದ ಅಂಬಣ್ಣ ನಾಯಕ,ಆಫ್ರಿನ್ ಬೇಗಂ , ಶೈಲಜಾ ,ಶರಣಬಸವ ಕರಡಿಗುಡ್ಡ, ಉಪನ್ಯಾಸಕರಾದ ದೇವೇಂದ್ರಪ್ಪ ಕರಡಿಗುಡ್ಡ ಊರಿನ ಮುಖಂಡರಾದ ನರಸಿಂಹ ನಾಯಕ, ಎಂ ವೆಂಕಟೇಶ ನಾಯಕ , ಆರ್ ಹುಸೇನಪ್ಪ ನಾಯಕ ಭಾಗಯ್ಯ ನಾಯಕ ಸೇರಿದಂತೆ ಕಾಲೇಜಿನ ಉಪನ್ಯಾಸಕರು ಮತ್ತು ಶಿಬಿರಾರ್ಥಿಗಳು ಗ್ರಾಮಸ್ಥರು ಭಾಗವಹಿಸಿದ್ದರು. ಅನಿತಾ ನಿರೂಪಿಸಿದರು, ಪವಿತ್ರಾ ಸ್ವಾಗತಿಸಿದರು, ಸಣ್ಣ ಚನ್ನಬಸ್ಸಮ್ಮ ವಂದಿಸಿದರು.

# ವಿದ್ಯಾರ್ಥಿಗಳು ನೈತಿಕ ತತ್ವ, ಮೌಲ್ಯ ಅಳವಡಿಸಿಕೊಳ್ಳಿ : ಮಂಜುನಾಥ ಶಿಕ್ಷಕರು



**ನೈಜ್ಯ ದೆಸೆ ನ್ಯೂಸ್**

ಹಾಲಾಪೂರ: ಗ್ರಾಮದ ಸರಕಾರಿ ಉನ್ನತಿಕರಿಸಿದ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಸರಸ್ವತಿ ಪೂಜೆ ಹಾಗೂ 8ನೇ ತರಗತಿ ವಿದ್ಯಾರ್ಥಿಗಳ ಬೀಳ್ಕೊಡಿಗೆ ಸಮಾರಂಭವನ್ನು ವಿಜೃಂಭಣೆಯಿಂದ ಆಚರಿಸಲಾಯಿತು. ಕಾರ್ಯಕ್ರಮವನ್ನು ಮಂಜುನಾಥ ಮುಖ್ಯಗುರುಗಳು ಹಾಗೂ ತಾಲೂಕು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷರು ಉದ್ಘಾಟಿಸಿದರು.ಈ ಸಂದರ್ಭದಲ್ಲಿ ಮಾತನಾಡಿದ ಅವರು, ವಿದ್ಯಾರ್ಥಿಗಳು ಜೀವನದಲ್ಲಿ ಉತ್ತಮ ಶಿಸ್ತು, ಪರಿಶ್ರಮ ಹಾಗೂ ಸತ್ಯನಿಷ್ಠೆಯನ್ನು ಅಳವಡಿಸಿಕೊಂಡು ಮುಂದಿನ ದಿನಗಳಲ್ಲಿ ಸಮಾಜಕ್ಕೆ ಮಾದರಿಯಾಗಬೇಕು ಎಂದು ತಿಳಿಸಿದರು. ಗುರುಹಿರಿಯರಿಗೆ ಗೌರವ ಕೊಡುವ ಗುಣವನ್ನು ಬೆಳೆಸಿಕೊಳ್ಳಬೇಕು. ನೈತಿಕ ಮೌಲ್ಯಗಳು, ಮಾನವೀಯತೆ ಮತ್ತು ಸತ್ಸಂಸ್ಕಾರಗಳನ್ನು ಮೈಗೂಡಿಸಿಕೊಂಡರೆ ಜೀವನದಲ್ಲಿ ಯಾವುದೇ ಗುರಿಯನ್ನು ಸಾಧಿಸಲು ಸಾಧ್ಯವಾಗುತ್ತದೆ ಎಂದು ಹೇಳಿದರು.ಇದೇ ವೇಳೆ 8ನೇ ತರಗತಿ ವಿದ್ಯಾರ್ಥಿಗಳಿಗೆ ಶುಭ ಹಾರೈಕೆಗಳನ್ನು ತಿಳಿಸಿ, ಮುಂದಿನ ವಿದ್ಯಾಭ್ಯಾಸದಲ್ಲಿ ಉತ್ತಮ ಸಾಧನೆ ಮಾಡಿ ಶಾಲೆಯ ಕೀರ್ತಿಯನ್ನು ಹೆಚ್ಚಿಸಬೇಕೆಂದು ಆಶಿಸಿದರು. ವಿದ್ಯಾರ್ಥಿಗಳು ತಮ್ಮ ಗುರಿಯನ್ನು ಸ್ಪಷ್ಟವಾಗಿ ನಿಗದಿಪಡಿಸಿಕೊಂಡು ಶ್ರಮಿಸಿದರೆ ಯಶಸ್ಸು ಖಚಿತ ಎಂದು ಹೇಳಿದರು.ಕಾರ್ಯಕ್ರಮದಲ್ಲಿ ಮುಖ್ಯಗುರು ಹನುಮಂತರಾಯ ದೇಸಾಯಿ, ಅರವಿಂದ ಪಾಟೀಲ್, ಶಿವಶಂಕರಗೌಡ ಹಾಗೂ ಶಾಲೆಯ ಶಿಕ್ಷಕಿಯರಾದ ದ್ಯಾವಮ್ಮ, ಸುಜಾತಾ ನಾಗಲಿಕರ, ನೇತ್ರಾವತಿ, ಬಸ್ಸಮ್ಮ, ಹನುಮಂತಮ್ಮ, ಮಂಜುಳಾ ಮತ್ತು ಗ್ರಾಮಸ್ಥರು ಉಪಸ್ಥಿತರಿದ್ದರು.ನಂತರ ವಿದ್ಯಾರ್ಥಿಗಳಿಂದ ಹಾಡು, ನೃತ್ಯ ಸೇರಿದಂತೆ ಹಲವು ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಿತು. ಕಾರ್ಯಕ್ರಮವು ಸಂತೋಷ ಹಾಗೂ ಉತ್ಸಾಹದ ವಾತಾವರಣದಲ್ಲಿ ನೆರವೇರಿತು.

# ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದಿಂದ ನಶಾಮುಕ್ತ ಭಾರತ ಅಭಿಯಾನ; ರಾಯಚೂರು ಜಿಲ್ಲೆಯಲ್ಲಿ ಸಂಚಲನ

**ನೈಜ್ಯ ದೆಸೆ ನ್ಯೂಸ್**

**ರಾಯಚೂರು: ನಶಾ ಮುಕ್ತ ಭಾರತ, ನಶಾ ಮುಕ್ತ ಕರ್ನಾಟಕ, ನಶಾ ಮುಕ್ತ ಕ್ಯಾಂಪಸ್ ಸಂದೇಶದಡಿ ಮಾರ್ಚ 6ರಂದು ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದಿಂದ ನಡೆದ ಬೃಹತ್ ವಾಕಥಾನ್ ರಾಯಚೂರು ನಗರದಲ್ಲಿ ಹೊಸ ಸಂಚಲನ ಮೂಡಿಸಿತು. ವೈದ್ಯಕೀಯ ಶಿಕ್ಷಣದ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ವಾಕಥಾನದಲ್ಲಿ ಭಾಗಿಯಾಗಿದ್ದು ವಿಶೇಷವಾಗಿತ್ತು. ಬೆಳ್ಳಂ ಬೆಳಗ್ಗೆಯೇ, ಶಿಕ್ಷಣ ಸಂಸ್ಥೆಗಳ ಬಸ್‌ಗಳನ್ನು ಏರಿ ವಿದ್ಯಾರ್ಥಿಗಳು ತಂಡೋಪತಂಡವಾಗಿ ಪೊಲೀಸ್ ಫರೇಡ್ ಮೈದಾನದತ್ತ ಆಗಮಿಸಿದರು.**

ಬೃಹತ್ ವಾಕಥಾನ್‌ದಲ್ಲಿ ರಾಜೀವ್ ಗಾಂಧಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ, ನವೋದಯ ಶಿಕ್ಷಣ ಸಂಸ್ಥೆ, ಸೆಂಟ್ರಲ್ ಸ್ಕೂಲ್, ಕೆಪಿಎಸ್‌ವಿಎಸ್ ಆಯುರ್ವೇದ ವೈದ್ಯಕೀಯ ಕಾಲೇಜು, ಪೂರ್ಣಿಮಾ ಆಯುರ್ವೇದಿಕ್ ಕಾಲೇಜ್, ಶಿಲ್ಪಾ ಮೆಡಿಕೇರ್, ನಂದಿನಿ ಮೆಡಿಕಲ್ ಕಾಲೇಜ್, ನವೋದಯ ದಂತ್ ಕಾಲೇಜ್, ವಿಎಲ್ ಕಾಲೇಜ್ ಆಫ್ ಫಾರ್ಮಸಿ ಸೇರಿದಂತೆ ಬೇರೆ ಬೇರೆ ಶಿಕ್ಷಣ ಸಂಸ್ಥೆಗಳ ಅಂದಾಜು 5000 ವಿದ್ಯಾರ್ಥಿಗಳು ಭಾಗಿಯಾಗಿದ್ದರು. ಇದೆ ವೇಳೆ, ಅಂಗಾಂಗ ಜಾಗೃತಿಯ ಅಭಿಯಾನವು ನಡೆಯಿತು. ಪೂಜ್ಯರ ಆಗಮನದಿಂದ ಬಲ: ಶ್ರೀ ರಾಘವೇಂದ್ರ ಸ್ವಾಮಿಗಳ ಮಠದ ಪೀಠಾಧಿಪತಿಗಳಾದ ಪರಮಪೂಜ್ಯ 108 ಶ್ರೀ ಸುಬುಧೇಂದ್ರ ತೀರ್ಥರು ರಾಯಚೂರು ನಗರಕ್ಕೆ ಆಗಮಿಸಿ ವಾಕಥಾನ್‌ದಲ್ಲಿ ಭಾಗಿಯಾಗಿ ಅಭಿಯಾನಕ್ಕೆ ಬಲ ತುಂಬಿದರು.

ಜಿಲ್ಲಾ ಪೊಲೀಸ್ ಮೈದಾನದ ಆವರಣದಲ್ಲಿ ಆಯೋಜನೆಯಾಗಿದ್ದ ಕಾರ್ಯಕ್ರಮಕ್ಕೆ ಶ್ರೀಗಳು ಆಗಮಿಸುತ್ತಿದ್ದಂತೆ ನೆರೆದಿದ್ದ ವಿದ್ಯಾರ್ಥಿ ಸಮೂಹಕ್ಕೆ ಹೆಚ್ಚಿನ ಬಲ ಬಂದಿತು. ಬೃಹತ್ ವಾಕಥಾನ್‌ಗೆ ಶ್ರೀಗಳು ವಿದ್ಯುಕ್ತ ಚಾಲನೆ ನೀಡಿದರು. ಪೊಲೀಸ್ ಫರೇಡ್ ಮೈದಾನದಿಂದ ಸಾಲಾಗಿ ರಸ್ತೆಗಿಳಿದ ವಿದ್ಯಾರ್ಥಿಗಳು ಜನಜಾಗೃತಿಯ ಫಲಕಗಳನ್ನು ಕೈಯಲ್ಲಿ ಹಿಡಿದು ಸಾಗಿದರು. ದ್ವಿಚಕ್ರ ಸೇರಿದಂತೆ ಇನ್ನೀತರ ವಾಹನಗಳ ಸಂಚಾರಕ್ಕೆ ಅಡೆತಡೆಯಾಗುವಂತೆ ವಿದ್ಯಾರ್ಥಿಗಳು ಒಗ್ಗೂಡಿ ಬೀದಿಗಿಳಿದು ಜನಜಾಗೃತಿ ಮೂಡಿಸಿದ್ದು ವಿಶೇಷವಾಗಿತ್ತು. ಗಮನ ಸೆಳೆದ ಫಲಕಗಳು: ನಿಮ್ಮ ಬದುಕು ಅಮೂಲ್ಯ ವ್ಯವಸಕ್ಕೆ ಬಲಿಯಾಗಬೇಡಿ., ಡ್ರಗ್ಸ್ ಅಂದರೆ ಸಾವಿನ ಬಲೆ, ಒಂದು ಸುಟ್ಟು ಹೋದ ಸೀಗರೇಟು ಹೇಳುತ್ತದೆ ಇವತ್ತು ನನ್ನ ಸಾವಿಗೆ ಕಾರಣ ನೀನು ನಾಳೆ ನಿನ್ನ ಸಾವಿಗೆ ಕಾರಣ ನಾನು., ನಶೆ ರಹಿತ ಜೀವನವೇ ನಿಜವಾದ ಸ್ವಾತಂತ್ರ ?ಯ., ನಶೆ ಮುಕ್ತ ಜೀವನ ಸಂತೃಪ್ತ ಜೀವನ., ಯುವರ್ ಲೈಫ್ ಈಸ್ ಪ್ರೀಸಿಯೆಸ್ ಡೋಂಟ್ ವೇಸ್ಟ್ ಇಟ್ ಆನ್ ಡ್ರಗ್ಸ್., ಬಿ ಸ್ಮಾರ್ಟ ಡೋಂಟ್ ಸ್ಟಾರ್ಟ ಡ್ರಗ್ಸ್ ಎನ್ನುವಂತಹ ಜನಜಾಗೃತಿ ಫಲಕಗಳು ವಾಕಥಾನ್ ವೇಳೆ ಗಮನ ಸೆಳೆದವು. ಶ್ರೀಗಳ ಸಂದೇಶ: ಈ ವೇಳೆ ಶ್ರೀ ಸುಬುಧೇಂದ್ರ ತೀರ್ಥರು ಮಾತನಾಡಿ, ಸಾಮಾಜಿಕ ಚಟುವಟಿಕೆಗಳ ಜೊತೆಗೆ ಮನುಷ್ಯ ತನ್ನ ಜೀವನದ ಬಗ್ಗೆ ಸಹ ಹೆಚ್ಚಿನ ಗಮನ ಕೊಡಬೇಕು.




ಕುಡಿತ, ಗಾಂಜಾ ಸೇವನೆ, ಸೀಗರೇಟ್ ಸೇವನೆಯಂತಹ ಕೆಟ್ಟ ಚಟಗಳಿಂದ ಪ್ರತಿಯೊಬ್ಬರು ದೂರ ಇರಬೇಕು. ನಶಮುಕ್ತನಾಗಿರುತ್ತೇನೆ ಎಂದು ಪ್ರತಿಯೊಬ್ಬರು ಸಂಕಲ್ಪ ಮಾಡಬೇಕು. ತನ್ನ ಸುತ್ತಲಿನವರಿಗೂ ದುಶ್ಚಟಗಳಿಂದ ದೂರ ಇರುವಂತೆ ಸಲಹೆ ಮಾಡಬೇಕು ಎಂದು ತಿಳಿಸಿದರು. ಪ್ರಸ್ತುತ ದಿನಗಳಲ್ಲಿ ನಾವು ಹಣ ಕೊಟ್ಟು ರೋಗ-ರುಜಿನ ತೆಗೆದುಕೊಳ್ಳುತ್ತಿದ್ದೇವೆ?. 2018ರ ಅಂಕಿ-ಅಂಶಗಳ ಪ್ರಕಾರ ಜಗತ್ತಿನಲ್ಲಿ 30 ಕೋಟಿಗೂ ಹೆಚ್ಚು ಜನರು ಮಾದಕ ವ್ಯಸನಿಗಳಾಗಿದ್ದಾರೆ. ಅದರಲ್ಲಿ 10 ಕೋಟಿಯಷ್ಟು ಜನರು ಭಾರತೀಯರು ಎಂಬುದು ಆತಂಕಕಾರಿ ಸಂಗತಿ ಎಂದರು. ವ್ಯಸನ ಮುಕ್ತ ಸಮಾಜ ನಿರ್ಮಾಣ ಮಾಡಲು ಎಲ್ಲರೂ ಕೈಜೋಡಿಸಬೇಕು. ಜನಸಾಮಾನ್ಯರಿಗೆ ವಿದ್ಯಾವಂತರು ಜಾಗೃತಿ ಮೂಡಿಸುವ ಕಾರ್ಯವಾಗಬೇಕೆಂದರು. ಜಿಲ್ಲಾಧಿಕಾರಿಗಳು ಭಾಗಿ: ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಭಾಗಿಯಾದರು.

ಈ ವೇಳೆ ಅವರು ಮಾತನಾಡಿ, ರಾಯಚೂರು ಜಿಲ್ಲೆಗೆ ಈ ದಿನ ಒಂದು ಮಹತ್ವವಾದ ದಿನವಾಗಿದೆ ಎಂದು ಸೇರಿದ್ದ ವಿದ್ಯಾರ್ಥಿ ಸಮೂಹವನ್ನು ಕಂಡು ಅಭಿಯಾನದ ಪ್ರಯತ್ನಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರು. ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಕಾರ್ಯ ಅತ್ಯಂತ ಶ್ಲಾಘನೀಯವಾಗಿದೆ. ದೂರದ ಬೆಂಗಳೂರಿನಿಂದ ಇಲ್ಲಿಗೆ ಆಗಮಿಸಿ, ಎಲ್ಲ ಶಿಕ್ಷಣ ಸಂಸ್ಥೆಗಳನ್ನು ವಿಶ್ವಾಸಕ್ಕೆ ತೆಗೆದುಕೊಂಡು ಈ ರೀತಿ ಅರ್ಥಪೂರ್ಣ ಕಾರ್ಯಕ್ರಮ ಮಾಡಿದ್ದು ಸಮಾಜಮುಖಿ ಕಾರ್ಯವಾಗಿದೆ. ಈ ವಿಶ್ವವಿದ್ಯಾಲಯವು ಇದೆ ರೀತಿ ಜನಪಯೋಗಿ ಕಾರ್ಯಕ್ರಮಗಳನ್ನು ನಿರಂತರ ನಡೆಸಲಿ ಎಂದು ಆಶಿಸಿದರು. ರಾಯಚೂರು ಗಡಿ ಹಂಚಿಕೊಂಡಿರುವುದರಿಂದ ಇಲ್ಲಿ ಡ್ರಗ್ಸ್ ಪದಾರ್ಥಗಳ ಸಾಗಣೆ, ಮಾರಾಟ ಸಾಧ್ಯತೆ ಇರುತ್ತದೆ. ಇಂತಹ ಜಾಲವನ್ನು ಹತ್ತಿಕ್ಕಲು ಪೊಲೀಸ್ ಇಲಾಖೆಯು ಸನ್ನದ್ಧವಾಗಿದೆ. ಯುವಕರನ್ನು ದಾರಿ ತಪ್ಪಿಸುವ ಯಾವುದೇ ಅಘಾತಕಾರಿ ಕೃತ್ಯಗಳಿಗೆ ನಾವು ಅವಕಾಶ ಕೊಡುವುದಿಲ್ಲ ಎಂದು ತಿಳಿಸಿದರು.

ಜಿಲ್ಲೆಯ ಯಾವುದೇ ಕಡೆಗಳಲ್ಲಿ ಡ್ರಗ್ಸ್ ಮಾರಾಟ ಅಥವಾ ಸೇವನೆಯ ಪ್ರಕರಣಗಳ ಜಾಲವು ಕಂಡುಬಂದಲ್ಲಿ ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಜಿಲ್ಲಾಡಳಿತದ ಗಮನಕ್ಕೆ ತರಬೇಕು. ನಾವು ಪೊಲೀಸ್ ಇಲಾಖೆಯ ಮೂಲಕ ಅಂತಹ ಕೃತ್ಯವನ್ನು ಮಟ್ಟ ಹಾಕುತ್ತೇವೆ ಎಂದು ತಿಳಿಸಿದರು. ಉತ್ತಮ ಸಂದೇಶದ ಪ್ರಯತ್ನ: ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಕುಲಪತಿಗಳಾದ ಡಾ.ಬಿ.ಸಿ.ಭಗವಾನ್ ಅವರು ಮಾತನಾಡಿ, ನಮ್ಮ ಸಮಾಜಕ್ಕಾಗಿ ಉತ್ತಮ ಸಂದೇಶವೊಂದನ್ನು ಕೊಡಬೇಕು. ನಮ್ಮ ವಿದ್ಯಾರ್ಥಿಗಳನ್ನು ನಾವು ಆರೋಗ್ಯವಂತರಾಗಿ ಮಾಡಿದರೆ ಮುಂದಿನ ಸಮಾಜ, ಮುಂದಿನ ಭಾರತ, ಮುಂದಿನ ಕರ್ನಾಟಕ ಹಾಗೂ ಮುಂದಿನ ರಾಯಚೂರು ಜಿಲ್ಲೆಯನ್ನು ಸದೃಢವಾಗಿ ಕಟ್ಟಲು ಸಾಧ್ಯ ಆಗುತ್ತದೆ.



ಆ ದಿಶೆಯಲ್ಲಿ ಯೋಚಿಸಿ, ಯೋಜಿಸಿ ಈ ಕಾರ್ಯಕ್ರಮ ಹಮ್ಮಿಕೊಂಡಿದ್ದೇವೆ ಎಂದು ತಿಳಿಸಿದರು. ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯವು ಸುಮಾರು ಮೂರು ದಶಕಗಳ ಹಿಂದೆ ಪ್ರಾರಂಭವಾಗಿದ್ದು, ಸುಮಾರು 12 ಜಿಲ್ಲೆಗಳಲ್ಲಿ ನಶಾಮುಕ್ತ ಅಭಿಯಾನ ನಡೆಸಿದ್ದು ಸಾವಿರಾರು ಸಂಖ್ಯೆಯಲ್ಲಿ ವಿದ್ಯಾರ್ಥಿಗಳು ಭಾಗಿಯಾಗಿದ್ದಾರೆ. ವಿಶ್ವವಿದ್ಯಾಲಯ ಪ್ರತಿವರ್ಷವೂ ನೂರಕ್ಕೂ ಹೆಚ್ಚು ಚಿನ್ನದ ಪದಕಗಳನ್ನು ನೀಡುವ ಮೂಲಕ ಇಡೀ ದೇಶದಲ್ಲಿ ಅತ್ಯುತ್ತಮ ವಿಶ್ವವಿದ್ಯಾಲಯವಾಗಿ ಬೆಳೆದಿದೆ ಎಂದರು. ಕರ್ನಾಟಕ ರಾಜ್ಯ ಸರ್ಕಾರ, ಭಾರತ ಸರ್ಕಾರವು ನಮ್ಮ ಜೊತೆಗಿದೆ. ಜಿಲ್ಲೆಯ ಜನ ಪ್ರತಿನಿಧಿಗಳು ಸಂಪೂರ್ಣವಾಗಿ ಈ ಕಾರ್ಯಕ್ರಮವನ್ನು ಬೆಂಬಲಿಸಿದ್ದು, ಬಜೆಟ್ ಅಧಿವೇಶನ ಹಿನ್ನೆಲೆಯಲ್ಲಿ ಬೆಂಗಳೂರಿನಿಂದಲೇ ಎಲ್ಲ ಜನಪ್ರತಿನಿಧಿಗಳು ಈ ಕಾರ್ಯಕ್ರಮಕ್ಕೆ ಶುಭ ಕೋರಿದ್ದಾರೆ ಎಂದು ತಿಳಿಸಿದರು.

ಅಚ್ಚುಕಟ್ಟಾದ ಉಪಹಾರ ವ್ಯವಸ್ಥೆ: ಬೆಳಗ್ಗೆ ಪೊಲೀಸ್ ಫರೇಡ್ ಮೈದಾನದಿಂದ ಹೊರಟು ಎಪಿಎಂಸಿ ಸರ್ಕಲ್, ಬಸವೇಶ್ವರ ವೃತ್ತ, ಡಾ.ಬಿ.ಆರ್. ಅಂಬೇಡ್ಕರ್ ವೃತ್ತದ ಮಾರ್ಗವಾಗಿ ನಗರದ ಮಹಾತ್ಮ ಗಾಂಧಿ ಜಿಲ್ಲಾ ಕ್ರೀಡಾಂಗಣಕ್ಕೆ ವಾಕಥಾನ್ ಜಾಥಾದಡಿ ಆಗಮಿಸಿದ ವಿದ್ಯಾರ್ಥಿಗಳಿಗೆ ಜಿಲ್ಲಾ ಕ್ರೀಡಾಂಗಣದಲ್ಲಿ ಅಚ್ಚುಕಟ್ಟಾಗಿ ಉಪಹಾರ ಮತ್ತು ಕುಡಿಯುವ ನೀರಿನ ವ್ಯವಸ್ಥೆ ಮಾಡಲಾಗಿತ್ತು. ರಾಯಚೂರು ಜಿಲ್ಲಾ ವ್ಯಾಪ್ತಿಯ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಕರ್ನಾಟಕಕ್ಕೆ ಸಂಯೋಜನೆಗೊಳಪಟ್ಟಿರುವ ಕಾಲೇಜುಗಳ ಸಂಘ, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಕರ್ನಾಟಕ ದಿಶಾಭೋದ್ ಫೌಂಢೇಶನ್ ಮತ್ತು ನಾರ್ಕೋಟಿಕ್ಸ್ ಕಂಟ್ರೋಲ್ ಬ್ಯೂರೋ ಇವರ ಸಹಯೋಗದೊಂದಿಗೆ ಸ್ವಾಸ್ತ್ಯ ಭಾರತ, ಶ್ರೇಷ್ಠ ಭಾರತ, ಯುವ ಶುದ್ಧಿ ಅಭಿಯಾನ ಅಂಗವಾಗಿ ಹಮ್ಮಿಕೊಂಡಿದ್ದ ವಾಕಥಾನ್ ಕಾರ್ಯಕ್ರಮದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಸು ಗಿರಿ, ರಾಯಚೂರು ರಿಮ್ಸ್ ಸಂಸ್ಥೆಯ ನಿರ್ದೇಶಕರಾದ ಡಾ.ರಮೇಶ ಬಿ.ಹೆಚ್., ನವೋದಯ ಮೆಡಿಕಲ್ ಸಂಸ್ಥೆಯ ಮುಖ್ಯಸ್ಥರಾದ ಎಸ್.ಆರ್.ರೆಡ್ಡಿ, ಈಶ್ವರಿ ವಿಶ್ವವಿದ್ಯಾಲಯದ ಬಿ.ಕೆ.ಸ್ಮಿತಾ ಅಕ್ಕನವರು, ನಾರ್ಕೋಟಿಕ್ಸ್ ಕಂಟ್ರೋಲ್ ಬ್ಯೂರೋ ನಿರೀಕ್ಷಕರಾದ ವಿಕಾಸ್ ಸಿಂಗ್, ದಿಶಾಭೋದ್ ಫೌಂಡೇಶನ್ ಡಾ.ಹರ್ಷ ಹರ್ದಾರ್, ಎಸ್.ಪಿ.ಚಿದಾನಂದ್, ನವೋದಯ ವೈದ್ಯಕೀಯ ಕಾಲೇಜಿನ ಪ್ರಾಂಶುಪಾಲರಾದ ಡಾ.ದೇವಾನಂದ, ಹೃದ್ರೋಗ ತಜ್ಞರು ಹಾಗೂ ರಾಜೀವ್ ಗಾಂಧಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯ ಪ್ರಭಾರಿ ವಿಶೇಷಾಧಿಕಾರಿ ಡಾ.ಮುರಳಿ ರಾವ್, ಪೂರ್ಣಿಮಾ ಆಯುರ್ವೇದ ವೈದ್ಯಕೀಯ ಕಾಲೇಜಿನ ಪ್ರಾಂಶುಪಾಲರಾದ ಡಾ.ಚಂದ್ರಶೇಖರ ರೆಡ್ಡಿ, ನವೋದಯ ದಂತ ವೈದ್ಯಕೀಯ ಕಾಲೇಜಿನ ಪ್ರಾಂಶುಪಾಲರಾದ ಡಾ.ಗಿರೀಶ್ ಕಟ್ಟಿ ಸೇರಿದಂತೆ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಅಧಿಕಾರಿಗಳು, ಸಿಬ್ಬಂದಿ ವರ್ಗ, ಸೆನೆಟ್, ಸಿಂಡಿಕೇಟ್, ಅಕೆಡೆಮಿಕಲ್ ಕೌನ್ಸಿಲ್ ಸದಸ್ಯರು ಹಾಗೂ ವಿವಿಧ ಕಾಲೇಜುಗಳ ಆಡಳಿತ ಮಂಡಳಿ, ಅಧ್ಯಕ್ಷರು, ಪ್ರಾಂಶುಪಾಲರು ಮತ್ತು ಸಿಬ್ಬಂದಿಗಳು ಸೇರಿದಂತೆ ಇತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.